# ಶತಮಾನ ಕಂಡ ಸಾಹಿತ್ಯ ಪರಿಷತ್ತಿಗೆ: ಮೋಸ ಕೊಡಿರಂಗಪ್ಪ

• ಉದಯವಾಹಿನಿ, ಬೆಂಗಳೂರು

ಆರು ಕೋಟಿಗೂ ಹೆಚ್ಚು ಜನ ಇದ್ದೇವೆ ಒಂದುವರೆ ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವಿದೆ, ಒಂದೊಂದು ರಾಜ್ಯಕ್ಕೂ ಮಾರ್ಗದರ್ಶನ ಕೊಡೊ ಕವಿಗಳು ಮಹನೀಯರು ಹುಟ್ಟಿ ಕನ್ನಡ ಬಾಷೆಯನ್ನ ಬೆಳಸಿದ್ದಾರೆ, ಬೆಂಗಳೂರಿಗೆ ವಿಶ್ವದಲ್ಲೇ ಹೆಸರಿದೆ ಆದರೆ ನಾನು ನುಡಿಗೆ ಹೆಸರುವಾಸಿಯಾದ ಮತ್ತು ಶತಮಾನ ಕಂಡ ರಾಜ್ಯ ಸಾಹಿತ್ಯ ಪರಿಷತ್ತು ಇಂದು ಅಸಡ್ಡೆಯಿಂದ ನೋ ಹೀಗೋ ಅಹಂನಿಂದ ನೋ ಮೋಸ ಮಾಡ್ತಿವಿ ಅಂದರೆ ದೇವರು ಕೂಡ ಕ್ಷಮಿಸೋದಿಲ್ಲ, ಎಂದು ಕೊಡಿರಂಗಪ್ಪ ಅಸಮಾಧಾನ ಹೊರಹಾಕಿದ್ರು.


ದೇವನಹಳ್ಳಿ ತಾಲ್ಲೂಕು, ವಿಜಯಪುರ ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರುಕನ್ನಡ ನಾಡಿನಲ್ಲಿ ವಿಶ್ವ ಮಾನವರಾಗಿ ನಿಂತುಕೊಂಡಿದ್ದಾರೆ ದಕ್ಷಿಣ ಭಾರತ ಯಾವುದಕ್ಕೂ ಕಡಿಮೆ ಇಲ್ಲದ ಸಾಹಿತ್ಯ ಇದೆ, ಶರಣರ ಸಾಹಿತ್ಯ ಆಗಲಿ ಭಕ್ತಿ ಸಾಹಿತ್ಯಾಗಲಿ ಕೀರ್ತನ ಸಾಹಿತ್ಯಗಳೇ ಬಂಡಾಯ ಪ್ರಗತಿಪರವಾಗಲಿ ಕಾವ್ಯ ಸಾಹಿತ್ಯವಾಗಲಿ ಅಗಾಧವಾದ ವಿಚಾರವನ್ನು ಕೊಟ್ಟಿದ್ದಾರೆ . ಇಂತಹ ನಾಡಿನಲ್ಲಿ ಕನ್ನಡವನ್ನ ಕನ್ನಡ ಸಾಹಿತ್ಯವನ್ನು ಬೆಳೆಸಲು ಅನೇಕರು ಶ್ರಮಿಸಿದ್ದಾರೆ.ಈಗ ಅದಕ್ಕೆ ದ್ರೋಹ ಮಾಡುತ್ತಿದ್ದಾರೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ದೇವನಹಳ್ಳಿ ಘಟಕದ ನಿಕಟ ಪೂರ್ವ ಅಧ್ಯಕ್ಷರದ ಆರ್ ಕೆ ನಂಜೇಗೌಡ, ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಬಿ ಎನ್ ಕೃಷ್ಣಪ್ಪ, ನೂತನ ಅಧ್ಯಕ್ಷ ವೈ ಎ ದೇವರಾಜುಗೆ ಕನ್ನಡ ಬಾವುಟ ನೀಡುವ ಮೂಲಕ ಅಧಿಕಾರ ಹಸ್ತಾಂತರ ಮಾಡಿದ್ರು.

ನಿಕಟ ಪೂರ್ವ ಅಧ್ಯಕ್ಷ ನಂಜೇಗೌಡ ಮಾತನಾಡಿ, ಅಧಿಕಾರ ಯಾರಿಗೂ ಶಾಶ್ವತ ಅಲ್ಲ ಪ್ರತಿಯೊಬ್ಬರಿಗೂ ಸಿಗುವಂತಗಾಬೇಕು, ಸಿಕ್ಕಿರುವ ಅವಧಿಯಲ್ಲಿ ಏನಾದರೂ ಸಾಧಿಸಬೇಕುಎಂದರು. ನಾನು ಗ್ರಾಮಾಂತರ ಜಿಲ್ಲೆಯ ಸಾಹಿತ್ಯ ಪರಿಷತ್ತು ಅಧ್ಯಕ್ಷ ಆದಮೇಲೆ ಅನೇಕ ಕಾರ್ಯಕ್ರಮದ ಮಾಡಿದು ಸಮಾಧಾನ ತಂದಿದೆ, ದೇವನಹಳ್ಳಿ ಅಧ್ಯಕ್ಷರಾಗಿ ಇಂದು ಅಧಿಕಾರ ಪಡೆದಿರುವ ದೇವರಾಜು ತಾಲ್ಲೂಕಿನಲ್ಲಿ ಅನೇಕ ಕನ್ನಡ ಪರ ಕಾರ್ಯಕ್ರಮ ಮಾಡಲಿ ಎಂದು ಶುಭ ಹಾರೈಸಿದ್ರು.

# ಶೇಷಾದ್ರಿಪುರ ರಾಘವೇಂದ್ರ ಸ್ವಾಮಿಗಳ ಮಠದ ವಾರ್ಷಿಕೋತ್ಸವ ಹಾಗೂ ಜಯತೀರ್ಥರ ಆರಾಧನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ನಗರದ ಶೇಷಾದ್ರಿಪುರದ ಪ್ಲಾಟ್ ಫಾರ್ಮ್ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ವಾರ್ಷಿಕೋತ್ಸವ ಹಾಗೂ ಶ್ರೀ ಜಯತೀರ್ಥರ ಆರಾಧನಾ ಮಹೋತ್ಸವದ ಅಂಗವಾಗಿ ಶ್ರೀ ಸುಶಮೀಂದ್ರ ಪಾರಾಯಣ ಸಮಿತಿಯ ಸದಸ್ಯರ ಪಾರಾಯಣದೊಂದಿಗೆ ಗುರುರಾಯರಿಗೆ ಫಲಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಶ್ರೀ ಸುಶಮೀಂದ್ರ ಭಜನಾ ಮಂಡಳಿಯ ಸದಸ್ಯರು ಹಾಗೂ ಇತರ ಭಕ್ತಾದಿಗಳ ಗಾಯನದೊಂದಿಗೆ ರಥೋತ್ಸವ, ಮಹಾಮಂಗಳಾರತಿ, ಅಲಂಕಾರ ಪಂಕ್ತಿ ಸೇವಾ ಮತ್ತು ಸಂಜೆಯ ಕಾರ್ಯಕ್ರಮದಲ್ಲಿ ಮುತ್ಯಾಲನಗರದ

ಶ್ರೀ ಗುರುರಾಜ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ಅಷ್ಟಾವಧಾನ, ಮಹಾಮಂಗಳಾರತಿ ಕಾರ್ಯಕ್ರಮಗಳು ಜರುಗಿದವು.

## ನನ್ನ ವಿರುದ್ಧದ ಆರೋಪ ಸತ್ಯಕ್ಕೆ ದೂರ..

• ಉದಯವಾಹಿನಿ, ಹೊಸಕೋಟೆ

ಬದ್ರುದ್ದಿನ್ ವೆಲ್ಫೇರ್ ಅಸೋಸಿಯೇಷನ್ ಸಂಸ್ಥೆ ಹಾಗೂ ನನ್ನ ವಿರುದ್ಧ ಮಾಡಿರುವ ಎಲ್ಲಾ ಆರೋಪಗಳು ಸತ್ಯಕ್ಕೆ ದೂರವಾದವು. ನನ್ನ ಕಡೆಯಿಂದ ಯಾವುದೇ ರೀತಿಯ ವಂಚನೆ ನಡೆದಿಲ್ಲ ಎಂದು ಬದ್ರುದ್ದಿನ್ ವೆಲ್ಫೇರ್ ಅಸೋಸಿಯೇಷನ್ ರಾಷ್ಟ್ರೀಯ ಅಧ್ಯಕ್ಷ ಯಳಚಹಳ್ಳಿ ವೈ. ಶಶಿಕುಮಾರ್ ಸ್ಪಷ್ಟಪಡಿಸಿದ್ದಾರೆ.

ನಗರದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಸ್ಪಷ್ಟನೆ ನೀಡಿದ ಅವರು, ಹಣ ಡಬಲ್ ಮಾಡುವ ವಿಚಾರ ಹಾಗೂ ನಿವೇಶನಗಳನ್ನು ಕೊಡಿಸುವ ವಿಚಾರದಲ್ಲಿ ನನ್ನಿಂದ ಯಾವ ಕುಟುಂಬಗಳಿಗೂ ವಂಚನೆಯಾಗಿಲ್ಲ. ಈ ವಿಚಾರಕ್ಕೆ ಸಂಬಂಧಿಸಿದಂತೆ ಈಗಾಗಲೇ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಾಗಿದ್ದು, ವಿಚಾರಣೆ ಹಂತದಲ್ಲಿದೆ. ವಿಷಯ ಕೋರ್ಟ್‌ನಲ್ಲಿ ಇರುವಾಗ ಈ ರೀತಿ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಲ್ಲ ಶಂಕರ್ ಹಾಗೂ ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ಸಂಘಟನೆಯ ಕೋಲಾರ ಸಂದೇಶ್ ಅವರು ನನ್ನ ವಿರುದ್ಧ ಮಾಡುತ್ತಿರುವ ಎಲ್ಲಾ ಆರೋಪಗಳು ಸಂಪೂರ್ಣ ಸುಳ್ಳು ಮತ್ತು ಆಧಾರರಹಿತ. ಸಂಘಟನೆಗಳಿಗೆ ಸೂಕ್ತ ದಾಖಲೆಗಳನ್ನು ನೀಡದೆ ವಿನಾ ಕಾರಣ ನನ್ನ ಸಂಸ್ಥೆ ಹಾಗೂ ನನ್ನ ವಿರುದ್ಧ ಪಿತೂರಿ ಮಾಡಿ ಸಮಾಜದಲ್ಲಿ ನನ್ನನು ತೇಜೋವಧೆ ಮಾಡುವ ಹುನ್ನಾರ ನಡೆದಿದೆ. ಸಂಸ್ಥೆಯ ಘನತೆಗೆ ಕುಂದು ತರಲು ಮತ್ತು ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಲು ಈ ರೀತಿ ಅಪಪ್ರಚಾರ ಮಾಡಲಾಗುತ್ತಿದೆ'' ಎಂದು ಆಕ್ರೋಶ ವ್ಯಕ್ತಪಡಿಸಿದರು. ಇದೇ ರೀತಿ ಸಾಕಷ್ಟು ಜನರಿಗೆ ನಂಬಿಸಿ ಹಣ ವಸೂಲಿ ಮಾಡುತ್ತಿದ್ದಾರೆ. ಈ ಪ್ರಕರಣ ಕೋರ್ಟ್ ನಲ್ಲಿ ಮೊಕದ್ದಮೆ ದಾಖಲಿಸಿದ್ದೇನೆ ಶಂಕರ್ ಹಾಗು ಅವರ ಕುಟುಂಬದವರು ಹೆದರಿಸಿ ಬೆದರಿಸಿ ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

## ಸಚಿವ ಸ್ಥಾನ ಸಿಗದ ಹಿನ್ನೆಲೆ ಯಶವಂತರಾಯ ಗೌಡ ಪಾಟೀಲ್, ಬೇಳೂರು ಗೋಪಾಲಕೃಷ್ಣ ರಾಜೀನಾಮೆ?



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿ ನೂತನ ಸಚಿವರ ಅಂತಿಮ ಪಟ್ಟಿ ಹೊರಬಿದ್ದ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಅಸಮಾಧಾನ ಭುಗಿಲೆದ್ದಿದೆ. ಇಂದು ಸಂಜೆ ರಾಜಭವನದಲ್ಲಿ ಪ್ರಮಾಣವಚನ ಸ್ವೀಕಾರಕ್ಕೆ ಮುಹೂರ್ತ ನಿಗದಿಯಾಗಿದೆ. ಆದರೆ, ಈ ನಡುವೆ ತಮಗೆ ಕ್ಯಾಬಿನೆಟ್‌ನಲ್ಲಿ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಹಲವು ಶಾಸಕರು ರಾಜೀನಾಮೆಗೆ ಮುಂದಾಗಿದ್ದಾರೆ. ವಿಜಯಪುರ ಜಿಲ್ಲೆಯ ಇಂಡಿ ಕ್ಷೇತ್ರದ ಶಾಸಕ ಯಶವಂತರಾಯ ಗೌಡ ಪಾಟೀಲ್ ಅವರು ಸಚಿವ ಸ್ಥಾನ ಸಿಗದಿದ್ದಕ್ಕೆ ತೀವ್ರ ಅಸಮಾಧಾನಗೊಂಡು ತಮ್ಮ ಶಾಸಕ ಸ್ಥಾನಕ್ಕೇ ರಾಜೀನಾಮೆ ನೀಡಿದ್ದಾರೆ. ಹಿರಿಯ ನಾಯಕರಾಗಿದ್ದರೂ ತಮ್ಮನ್ನು ಸಂಪುಟದಿಂದ ಹೊರಗಿಟ್ಟಿರುವುದು ಅವರಿಗೆ ತೀವ್ರ ನಿರಾಸೆ ಮೂಡಿಸಿದೆ. ಹೀಗಾಗಿ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಕೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಇನ್ನು ಶಾಸಕ ಯಶವಂತರಾಯ ಗೌಡ ಪಾಟೀಲ್ ರಾಜೀನಾಮೆ ಬೆನ್ನಲ್ಲೇ ಇವರ ಹಾದಿಯಲ್ಲೇ ಇದೀಗ ಮತ್ತೊಬ್ಬ ಹಿರಿಯ ಶಾಸಕ ಬೇಳೂರು ಗೋಪಾಲಕೃಷ್ಣ ಅವರೂ ಕೂಡ ರಾಜೀನಾಮೆ ನೀಡಲು ಮುಂದಾಗಿದ್ದಾರೆ. ಈ ಕುರಿತು ಬಹಿರಂಗವಾಗಿ ಆಕ್ರೋಶ ವ್ಯಕ್ತಪಡಿಸಿರುವ ಶಾಸಕ ಬೇಳೂರು ಗೋಪಾಲಕೃಷ್ಣ, ನನಗೆ ಈ ರೀತಿ ಮೋಸವಾಗುತ್ತದೆ ಎಂದು ಅಂದಾಜಿಸಿರಲಿಲ್ಲ. ಹಿಂದುಳಿದ ವರ್ಗದಿಂದ ಬಂದಿರುವ ನನಗೆ ಸ್ಥಾನಮಾನ ನೀಡದಿರುವುದರ ಹಿಂದಿನ ಉದ್ದೇಶವೇನು? ಎಂದು ಪ್ರಶ್ನಿಸಿದ್ದಾರೆ. ನಾಳೆ ಬೆಳಿಗ್ಗೆ 10 ಗಂಟೆಗೆ ತಮ್ಮ ಶಾಸಕ ಸ್ಥಾನದ ಜೊತೆಗೆ ನಿಗಮ ಮಂಡಳಿ ಸ್ಥಾನಕ್ಕೂ ರಾಜೀನಾಮೆ ಸಲ್ಲಿಸುವುದಾಗಿ ಸ್ಪಷ್ಟಪಡಿಸಿದ್ದಾರೆ.

## ರಾಜ್ಯದಲ್ಲಿ ಮುಂದಿನ ಮೂರು ದಿನ ಭಾರಿ ಮಳೆ ಎಚ್ಚರಿಕೆ; ಹಲವೆಡೆ ರೆಡ್ ಅಲರ್ಟ್ ಘೋಷಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಆಗಸ್ಟ್ ಮೊದಲ ವಾರದಲ್ಲಿಯೇ ಭಾರೀ ಮಳೆಯಾಗುತ್ತಿದ್ದು ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿ ಮಳೆಯ ಆರ್ಭಟಕ್ಕೆ ಜನಜೀವನ ತತ್ತರಿಸಿ ಹೋಗಿದೆ. ಕಳೆದ 2 ದಿನಗಳಿಂದ ಭಾರಿ ಮಳೆ ಸುರಿದಿದೆ. ಇದರ ನಡುವೆ ಅಲ್ಲಲ್ಲಿ ಗುಡ್ಡ ಕುಸಿತ, ಮರ ಮುರಿದು ಬಿದ್ದಿರುವ ಘಟನೆಗಳೂ ಸಂಭವಿಸುತ್ತಿದೆ. ಇದೀಗ ಹವಾಮಾನ ಇಲಾಖೆ ಪ್ರಕಟಿಸಿರುವ ವರದಿ ಪ್ರಕಾರ ನಾಳೆ ಆಗಸ್ಟ್ 3ರಂದು ಸಹ ರಾಜ್ಯದ ಬಹುತೇಕ ಭಾಗಗಳಲ್ಲಿ ಬಾರೀ ಮಳೆ ಮುನ್ಸೂಚನೆ ನೀಡಿದೆ.

ರಾಜ್ಯದ 7ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಇನ್ನೂ 4 ದಿನ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಅಲ್ಲದೆ, ಐದು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಿದೆ. ಅದರ ಭಾಗವಾಗಿ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ ಜಿಲ್ಲೆಗಳಲ್ಲಿ ನಾಳೆಯಿಂದ ಮುಂದಿನ ಒಂದು ವಾರ ಮಳೆ ಆರ್ಭಟ ಮುಂದುವರೆಯಲಿದೆ.

## ನೇತ್ರ ತಜ್ಞ ಡಾ.ಎ. ಗಿರಿಧರ್ಗೆ ಬಿಒಎಸ್ ಗೋಲ್ಡನ್ ಒರೇಷನ್ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ಆಫ್ತಾಲ್ಮಿಕ್ ಸೊಸೈಟಿ (ಬೋಸ್)ಬೆಂಗಳೂರು ನೇತ್ರಶಾಸ್ತ್ರಜ್ಞರ ಸಂಘ) ವತಿಯಿಂದ ಆಯೋಜಿಸಲಾದ 'ಬಿಒಎಸ್ ಸಮ್ಮಿಟ್ 2026' ಯಶಸ್ವಿಯಾಗಿ ಸಮಾರೋಪಗೊಂಡಿತು. **''ಮಾಸ್ಟರಿಂಗ್ ದಿ ಮೇಝ್: ಡೈಲೆಮಾಸ್ ಟು ಡಿಸಿಷನ್ಸ್''** ಎಂಬ ಪರಿಕಲ್ಪನೆಯಡಿ ನಡೆದ ಎರಡು ದಿನಗಳ ರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ಹಿರಿಯ ನೇತ್ರ ತಜ್ಞರು, ರೆಟಿನಾ ತಜ್ಞರು, ಸಂಶೋಧಕರು, ವೈದ್ಯಕೀಯ ಶಿಕ್ಷಣ ತಜ್ಞರು, ಕಣ್ಣಿನ ಆರೈಕೆ ವೃತ್ತಿಪರರು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿ ಜ್ಞಾನ ವಿನಿಮಯ ನಡೆಸಿದರು. ಸಮ್ಮೇಳನವನ್ನು ಕರ್ನಾಟಕದ ಮೊದಲ ಮಹಿಳಾ ಹೃದ್ರೋಗ ತಜ್ಞೆ ಹಾಗೂ ದಕ್ಷಿಣ ಭಾರತದ ಮೊದಲ ಮಕ್ಕಳ ಹೃದ್ರೋಗ ತಜ್ಞೆ ಡಾ. ವಿಜಯಲಕ್ಷ್ಮಿ ಐ. ಬಾಳೆಕುಂದ್ರಿ ಉದ್ಘಾಟಿಸಿದರು. ಕರ್ನಾಟಕ ಆಫ್ತಾಲ್ಮಿಕ್ ಸೊಸೈಟಿಯ ಅಧ್ಯಕ್ಷ ಡಾ. ಶಿವರಾಮ್ ಹಾಗೂ ಕೆಎಂಸಿ ವೀಕ್ಷಕರಾದ ಡಾ. ದಿವಾಕರ್ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

# ಮೇಕೆದಾಟಿದರೆ ಸಂಕಷ್ಟಕ್ಕೆ ಪರಿಹಾರ

## ಉತ್ತಮ ಮಳೆ, ನೀರು ಹರಿಸಲು ಸಮಸ್ಯೆಯಿಲ್ಲ: ವರುಣನ ಕೃಪೆಯಿಂದ ಕೊಡಗಿನ ಭಾಗದಲ್ಲಿ ಉತ್ತಮ ಮಳೆಯಾಗುತ್ತಿದೆ.

• ಉದಯವಾಹಿನಿ, ಬೆಂಗಳೂರು

ಮಂಗಾರು ಕೊರತೆಯ ಈ ಸಂಕಷ್ಟ ಕಾಲದಲ್ಲಿಯೂ ನೀರು ಹರಿಸಬೇಕೆಂಬ ಆದೇಶವನ್ನು ಸಂಬಂಧಿಸಿದಂತೆ ಪಕ್ಷಾತೀತವಾಗಿ ಎದುರಿಸೋಣ. ಈ ಸಂಕಷ್ಟ ಸೂತ್ರಕ್ಕೆ ಶಾಶ್ವತ ಪರಿಹಾರ ವಾಗಿರುವ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಬೇಕಿರುವ ಅಗತ್ಯಕ್ರಮಗಳನ್ನು ತೆಗೆದು ಕೊಳ್ಳೋಣ ಎನ್ನುವ ಮಾತುಗಳು ಸರ್ವಪಕ್ಷ ಸಭೆಯಲ್ಲಿ ವ್ಯಕ್ತವಾಗಿದೆ. ತಮಿಳುನಾಡಿಗೆ ನಿತ್ಯ 3500 ಕ್ಯುಸೆಕ್ ನೀರು ಹರಿಸಬೇಕೆಂಬ ಕಾವೇರಿ ನೀರು ನಿಯಂತ್ರಣ ಪ್ರಾಧಿಕಾರದ ಆದೇಶದ ಬಳಿಕ ಕರ್ನಾಟಕದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಆದೇಶ ಮಾಡಿರುವಷ್ಟು ನೀರು ಹರಿಯುತ್ತಿದೆ. ಆದರೆ ಮಳೆ ಕೊರತೆ ಯಿರುವುದರಿಂದ, ಒಟ್ಟಾರೆಯಾಗಿ ಮುಂದಿನ ದಿನಗಳಲ್ಲಿ ಎದುರಾಗುವ ಸಮಸ್ಯೆಗಳನ್ನು ಯಾವ ರೀತಿ ಎದುರಿಸಬೇಕು ಎನ್ನುವುದನ್ನು ಚರ್ಚಿಸಲು ಗೃಹಕಚೇರಿ ಕೃಷ್ಣದಲ್ಲಿ ಸರ್ವಪಕ್ಷ ಸಭೆ ನಡೆಯಿತು. ಈ ಸಭೆಯಲ್ಲಿ ರಾಜ್ಯದ ಹಿತ ಕಾಯಲು ಏನೆ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ಕಾವೇರಿ ವಿಚಾರದಲ್ಲಿ ರಾಜ್ಯದ ಹಿತ ಕಾಯುವ ವಿಚಾರದಲ್ಲಿ ಏನೆ ಕ್ರಮಗಳನ್ನು ಕೈಗೊಳ್ಳಬೇಕು, ಯಾವ ನಿಲುವನ್ನು ರಾಜ್ಯ ಸರ್ಕಾರ ಹೊಂದಬೇಕು ಎಂಬ ಬಗ್ಗೆ ಚರ್ಚೆಗಳು ನಡೆದಿದ್ದು, ಇದರ ಜತೆಗೆ ಮೇಕೆದಾಟು ಯೋಜನೆ ಅನುಷ್ಠಾನದ ಬಗ್ಗೆಯೂ ಚರ್ಚೆ ನಡೆಸಲಾಗಿದೆ. ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕುಡಿಯುವ ನೀರಿಗೆ ನಾವು ಆದ್ಯತೆ ನೀಡಿದ್ದೇವೆ. ಕುಡಿಯುವ ನೀರನ್ನು ಸಂಗ್ರಹಿಸುವ ಜತೆಗೆ ರೈತರ ಹಿತದೃಷ್ಟಿಗೂ ಮುಂದಾಗಿದ್ದೇವೆ ಎಂದರು.

ರಾಜಕಾರಣ ಏನೇ ಇದ್ದರೂ ನಾವು ಅದನ್ನು ಬಿಟ್ಟು ಸಂದರ್ಭದಲ್ಲೂ ರಾಜ್ಯದ ರೈತರ ಹಿತಕ್ಕಾಗಿ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಎಲ್ಲರೂ ಹೊರಗೆ ಏನೇ ಹೇಳಿಕೆ ನೀಡಿದರೂ ರಾಜ್ಯದ ವಿಚಾರದಲ್ಲಿ ನೀವೆ ಸಹಕಾರ ನೀಡುತ್ತಾ ಬಂದಿದ್ದೀರಿ ಅದಕ್ಕೆ ನಾನು ಆಭಾರಿ ಎಂದರು. ಉತ್ತಮ ಮಳೆ, ನೀರು ಹರಿಸಲು ಸಮಸ್ಯೆಯಿಲ್ಲ: ವರುಣನ ಕೃಪೆಯಿಂದ ಕೊಡಗಿನ ಭಾಗದಲ್ಲಿ ಉತ್ತಮ ಮಳೆಯಾಗುತ್ತಿದೆ.

ಈಗಾಗಲೇ ನಮ್ಮಲ್ಲಿ 57 ಟಿಎಂಸಿ ನೀರು ಲಭ್ಯವಿದ್ದು, ಒಳಹರಿವು ಹೆಚ್ಚಾಗಿದೆ. ನಿತ್ಯ 3500 ಕ್ಯುಸೆಕ್ ನೀರು ಬಿಡಲು ಕಾವೇರಿ ಪ್ರಾಧಿಕಾರ ಆದೇಶಿಸಿದೆ. ಒಳಹರಿವು ಹೆಚ್ಚಾಗಿರುವುದರಿಂದ ಅಣೆಕಟ್ಟು ತುಂಬಿ ನೀರು ಹರಿದು ಹೋಗುತ್ತಿದೆ. ನೀರನ್ನು ಹಿಡಿದಿಟ್ಟುಕೊಳ್ಳಲು ಸಾಧ್ಯವಿಲ್ಲ. ತಮಿಳುನಾಡಿಗೆ ಬಿಡಬೇಕಿರುವ ನೀರಿಗಿಂತ ಹೆಚ್ಚಿನ ನೀರನ್ನು ಬಿಡಬೇಕಾಗುತ್ತದೆ. ಆದರೆ ನಾವು ಕುಡಿಯುವ ನೀರನ್ನು ಸಂಗ್ರಹಿಸುವ ಜತೆಗೆ ರೈತರ ಹಿತದೃಷ್ಟಿಯಿಂದಲೂ ಕ್ರಮಕ್ಕೆ ಮುಂದಾಗಿದ್ದೇವೆ.ರೈತರು ಈಗಾಗಲೇ ಹಾಕಿದ್ದ ಬೆಳೆ ರಕ್ಷಣೆಗೆ ಕೆಆರ್‌ಎಸ್ ಕಬಿನಿ ನಾಲೆಗಳಿಗೆ ನೀರು ಹರಿದಿದೆ ಎಂದು ವಿವರಿಸಿದರು. ಈ ನಡುವೆ ತಮಿಳುನಾಡು ಸರ್ಕಾರ ಕೂಡ ಸಂಕಷ್ಟ ಪರಿಸ್ಥಿತಿಯಲ್ಲಿ ಬೇಡಿಕೆ ಯಿಟ್ಟಿದೆ. ನೀರು ಹರಿಸುವ ಬಗ್ಗೆ ಡಿಎಂಕೆ ಪಕ್ಷ ಖಾಸಗಿಯಾಗಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ. ಅದಕ್ಕೆ ಮಾನ್ಯತೆ ಕೊಡುವುದು ಅನುಮಾನವಿದೆ. ಕೋರ್ಟ್ ವಿಚಾರ ನಿರ್ವಹಿಸುವಾಗ ಹಿರಿಯರ ಅನುಭವವನ್ನು ಪರಿಗಣಿಸಬೇಕಾಗಿದೆ. ರಾಜ್ಯದ ಹಿತ ಕಾಪಾಡಬೇಕಾಗಿದೆ. ಕೃಷಿ ಸಂಬಂಧ ಮಾರ್ಗದರ್ಶನ ನೀಡಬೇಕಾಗಿದೆ ಎಂದರು. ಮುಖ್ಯಮಂತ್ರಿ



ಉದಯವಾಹಿನಿ ಚಿತ್ರ

ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಿ.ಎಸ್.ಯಡಿಯೂರಪ್ಪ, ಎಚ್.ಡಿ.ಕುಮಾರಸ್ವಾಮಿ, ಸದಾನಂದಗೌಡ, ಬಸವರಾಜ ಬೊಮ್ಮಾಯಿ, ವೀರಪ್ಪ ಮೊಯ್ಲಿ, ಕೇಂದ್ರ ಸಚಿವರಾದ ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ಉಪಮುಖ್ಯಮಂತ್ರಿ ಜಿ.ಪರಮೇಶ್ವರ, ಸಚಿವರಾದ ರಾಮಲಿಂಗಾರೆಡ್ಡಿ, ಕೃಷ್ಣ ಭೈರೇಗೌಡ, ಎಂ.ಬಿ.ಪಾಟೀಲ, ಕೆ.ಜೆ. ಜಾರ್ಜ್, ದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ವಿರೋಧ ಪಕ್ಷದ ನಾಯಕ ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಎಚ್.ಕೆ.ಪಾಟೀಲ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿ ಪ್ರಸಾದ್, ನಿವೃತ್ತ ನ್ಯಾಯಾಧೀಶ ನಾಗಮೋಹನದಾಸ್, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಮುಖ್ಯಮಂತ್ರಿಯವರ ವಿಶೇಷ ಸಲಹೆಗಾರ ಜಿ.ಸಿ.ಚಂದ್ರಶೇಖರ್, ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಅಪರ ಮುಖ್ಯಕಾರ್ಯದರ್ಶಿ ತುಷಾರ್ ಗಿರಿನಾಥ್ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

ಸಂಕಷ್ಟ ಸಮಯದಲ್ಲಿ ಮೇಕೆದಾಟು ಶಾಶ್ವತ ಪರಿಹಾರ. ಈ ಬಗ್ಗೆ ನಾನು ಶೀಘ್ರ ನಿರ್ಧಾರ ಕೈಗೊಳ್ಳ ಬೇಕು. ತಮಿಳುನಾಡು ಸರ್ಕಾರದೊಂದಿಗೆ ಸೌಹಾರ್ದಯುತವಾಗಿ ಮಾತನಾಡಿ ತೀರ್ಮಾನವಾಗ ಬೇಕು ಎನ್ನುವ ಸಲಹೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರಿಂದ ಬಂದಿದೆ. ಮೇಕೆದಾಟಿಗೆ ನಮ್ಮ ಬೆಂಬಲವಿದೆ ಎಂದಿದ್ದಾರೆ. -ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ

ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಮಲೆನಾಡು, ಕೊಡಗು ಭಾಗದಲ್ಲಿ ಸುರಿದ ಮಳೆಯಿಂದಾಗಿ ಜಲಾಶಯಗಳಿಗೆ ಉತ್ತಮ ಪ್ರಮಾಣದ ನೀರು ಹರಿದುಬರುತ್ತಿದೆ. ಈ ಹಿನ್ನೆಲೆಯಲ್ಲಿ ತಮಿಳುನಾಡಿಗೆ ತರಾತುರಿಯಲ್ಲಿ ನೀರು ಹರಿಸಿ ಸಾಧನೆ ಎಂದು ಬಿಂಬಿಸಿಕೊಳ್ಳುವುದು ಸರಿಯಲ್ಲ. ಸುಪ್ರೀಂ ಕೋರ್ಟ್‌ನಲ್ಲಿ ಬಲವಾಗಿ ವಾದ ಮಂಡಿಸಬೇಕು.
- ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ

ಸಿಎಂ ಉತ್ತಮ ಮಳೆಯಾಗುತ್ತಿರುವುದರಿಂದ ಒಳಹರಿವು ಹೆಚ್ಚಾಗಿದೆ. ತಮಿಳುನಾಡಿಗೆ 3500 ಕ್ಯುಸೆಕ್ ನೀರನ್ನು ಬಿಟ್ಟರೂ, ರಾಜ್ಯಕ್ಕೆ ಸಮಸ್ಯೆಯಾಗುವುದಿಲ್ಲ. ಪ್ರಕೃತಿ ನಮಗೆ ಸಹಾಯ ಮಾಡಿದೆ. ಆದ್ದರಿಂದ ಕರ್ನಾಟಕ ಬಂದ್ ಮಾಡುವುದು ಬೇಡ, ಸಂಘಟನೆಗಳು ಬಂದ್ ನಿಲ್ಲಿಸಬೇಕು ಎಂದು ಡಿಕೆಶಿ ಮನವಿ ಮಾಡಿದ್ದಾರೆ. ಕುಡಿಯುವ ನೀರಿಗೆ 40 ಟಿಎಂಸಿ ಕಾಯ್ದಿರಿಸಬೇಕು. ನೀರಿನ ಸಂಗ್ರಹಣೆ ಬಗ್ಗೆ ತಮಿಳುನಾಡಿಗೆ ಮಾಹಿತಿ ಇದೆ. ತ.ನಾಡು ಸುಪ್ರೀಂಕೋರ್ಟ್‌ಗೆ ಹೋದರೂ ಪ್ರಯೋಜನ ಆಗದು. - ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ

## ಕರ್ನಾಟಕದ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ತಮಿಳುನಾಡು ಸರ್ಕಾರ

ಕಾವೇರಿ ನದಿ ನೀರು ಬಿಡುಗಡೆ ವಿಚಾರದಲ್ಲಿ ಕರ್ನಾಟಕ ಸರ್ಕಾರವು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ಹಾಗೂ ಕಾವೇರಿ ಜಲ ನಿಯಂತ್ರಣ ಸಮಿತಿ (ನೀಡಿದ್ದ ನಿರ್ದೇಶನಗಳನ್ನು ಪಾಲಿಸಿಲ್ಲ ಎಂದು ಆರೋಪಿಸಿರುವ ತಮಿಳುನಾಡು ಸರ್ಕಾರವು ಸುಪ್ರೀಂ ಕೋರ್ಟ್ ಮೊರೆ ಹೋಗಿದೆ.ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರ ಸೂಚನೆಯ ಮೇರೆಗೆ ಸೋಮವಾರ ಅರ್ಜಿ ಸಲ್ಲಿಸಲಾಗಿದೆ. ಕಾವೇರಿ ಪ್ರಾಧಿಕಾರಗಳು ಹಲವು ಬಾರಿ ನಿರ್ದೇಶನ ನೀಡಿದ್ದರೂ ಕರ್ನಾಟಕ ನಿಗದಿತ ಪ್ರಮಾಣದ ನೀರನ್ನು ಬಿಡುಗಡೆ ಮಾಡಿಲ್ಲ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಜುಲೈ 28ರಂದು ನಡೆದ ಸಿಡಬ್ಲ್ಯುಆರ್‌ಸಿ)ಯ 139ನೇ ಸಭೆಯಲ್ಲಿ ಕಾವೇರಿ ಜಲಾನಯನ ಪ್ರದೇಶದ ಜಲ ಹಾಗೂ ಹವಾಮಾನ ಪರಿಸ್ಥಿತಿಯನ್ನು ಪರಿಶೀಲಿಸಿ, ಜುಲೈ 29ರಿಂದ ಆಗಸ್ಟ್ 12ರವರೆಗೆ 15 ದಿನಗಳ ಕಾಲ ಪ್ರತಿ ಸೆಕೆಂಡಿಗೆ 3,500 ಕ್ಯೂಸೆಕ್ ನೀರನ್ನು ಬಿಳಿಗುಂಡ್ಲು ಗಡಿಯವರೆಗೆ ಹರಿಯುವಂತೆ ಕೃಷ್ಣರಾಜ ಸಾಗರ (ಹಾಗೂ ಕಬಿನಿ ಜಲಾಶಯಗಳಿಂದ ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಲಾಗಿತ್ತು. ಈ ನಿರ್ಧಾರವನ್ನು ಜುಲೈ 30ರಂದು ನಡೆದ ಸಿಡಬ್ಲ್ಯುಎಂಎ ಯ 54ನೇ ತುರ್ತು ಸಭೆಯಲ್ಲೂ ಪುನರುಚ್ಚರಿಸಲಾಗಿತ್ತು. ಜಲಾಶಯಗಳಲ್ಲಿನ ನೀರಿನ ಲಭ್ಯತೆ ಹಾಗೂ ಮಳೆಯ ಪ್ರಮಾಣವನ್ನು ಪರಿಶೀಲಿಸಿದ ಬಳಿಕ ಈ ಆದೇಶವನ್ನು ಮುಂದುವರಿಸಲಾಗಿತ್ತು.

## ನನ್ನ ರಾಜೀನಾಮೆ ಕೇಳುವವರು ಮೊದಲು 25 ದಿನ ಉಪವಾಸ ಸತ್ಯಾಗ್ರಹ ಮಾಡಲಿ: ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

3,991 ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ಲಿಖಿತ ಪರೀಕ್ಷೆಯಲ್ಲಿ ಅಕ್ರಮ ನಡೆದಿದ್ದು, ನೈತಿಕ ಹೊಣೆ ಹೊತ್ತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕೆಂದು ಪ್ರತಿಪಕ್ಷ ಒತ್ತಾಯ ಹಿನ್ನೆಲೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಮೊದಲು 25 ದಿನಗಳ ಕಾಲ ಉಪವಾಸ ಸತ್ಯಾಗ್ರಹ ಮಾಡಲಿ. ಪರಿಸ್ಥಿತಿ ನಿಯಂತ್ರಣಕ್ಕೆ ಬರದಿದ್ದರೆ ಲಾಠಿ ಚಾರ್ಜ್ ಮಾಡುತ್ತೇವೆ. ಆನಂತರ ನಾನು ರಾಜೀನಾಮೆ ನೀಡುತ್ತೇನೆ ಎಂದು ಹೇಳಿದ್ದಾರೆ.

ವಿಜಯಪುರ ತಿಕೋಟಾದ ಶ್ರೀ ಶಾರದಾಂಬ ಶೈಕ್ಷಣಿಕ ಸಂಸ್ಥೆಯ ಪರೀಕ್ಷಾ ಕೇಂದ್ರದಲ್ಲಿ ಭಾನುವಾರ ಪ್ರಶ್ನೆಪತ್ರಿಕೆ ಹಾಗೂ ಒಎಂಆರ್ ಶೀಟ್ ವಿತರಣೆ ವೇಳೆ ವ್ಯತ್ಯಾಸವಾಗಿದೆ ಎಂದು ಅಭ್ಯರ್ಥಿಗಳು ಆರೋಪಿಸಿ ಪರೀಕ್ಷಾ ಕೇಂದ್ರದಿಂದ ಹೊರಬಂದು ಪ್ರತಿಭಟನೆ ನಡೆಸಿದ್ದರು. ವಿಜಯಪುರ, ಬಾಗಲಕೋಟೆ ಸೇರಿದಂತೆ ರಾಜ್ಯದ ವಿವಿಧ ಕಡೆಗಳಲ್ಲಿ ಪರೀಕ್ಷಾ ಲೋಪವಾಗಿದೆ ಎಂದು ಆಪಾದಿಸಿ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಅಭ್ಯರ್ಥಿಗಳು ಪರೀಕ್ಷೆಯಿಂದ ಹೊರನಡೆಯುವಂತಾದ ಘಟನೆ ಆಡಳಿತದ ಸಂಪೂರ್ಣ ವೈಫಲ್ಯ ಮತ್ತು ಕ್ಷಮಿಸಲಾಗದ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿ. ಈ ವೈಫಲ್ಯದ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಬೇಕೆಂದು ಆಗ್ರಹಿಸಿದ್ದರು. ಸದಾಶಿವನಗರದ ನಿವಾಸದ ಮುಂದೆ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ಖರ್ಗೆ, ವಿಜಯಪುರ ತಿಕೋಟಾದ ಪರೀಕ್ಷಾ ಕೇಂದ್ರವೊಂದರಲ್ಲಿ ಪ್ರಶ್ನೆಪತ್ರಿಕೆ ಹಾಗೂ ಒಎಂಆರ್ ಶೀಟ್ ವಿತರಣೆಯಲ್ಲಿ ವ್ಯತ್ಯಾಸವಾಗಿದೆ ಎಂದು ಆರೋಪಿಸಿ ಕೆಲ ಅಭ್ಯರ್ಥಿಗಳು ಕೇಂದ್ರದಿಂದ ಹೊರಬಂದು ವಿರೋಧಿಸಿದರು. ನೂರಾರು ಮಂದಿ ಪ್ರತಿಭಟನೆ ನಡೆಸಿದರು. ಒಮ್ಮೆ ಪರೀಕ್ಷಾ ಕೇಂದ್ರದಿಂದ ಹೊರ ಹೋದರೆ ಮತ್ತೆ ಪ್ರವೇಶ ನಿಷೇಧವಿದ್ದರೂ ಪ್ರತಿಭಟಿಸಿರುವುದು ನಿಯಮಬಾಹಿರ. ಪರೀಕ್ಷೆ ಬರೆದ ಬಳಿಕ ಆಗಿರುವ ಲೋಪದ ಬಗ್ಗೆ ಗಮನ ಸೆಳೆಯಬಹುದಿತ್ತು ಎಂದರು. ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ಅಕ್ರಮ ನಡೆದಿದ್ದು, ರಾಜೀನಾಮೆ ನೀಡಬೇಕೆಂಬ ಪ್ರತಿಪಕ್ಷದ ಆರೋಪಕ್ಕೆ ಪ್ರತಿಕ್ರಿಯಿಸಿ, ಮೊದಲು ಅವರು 25 ದಿನಗಳ ಕಾಲ ಉಪವಾಸ ಸತ್ಯಾಗ್ರಹ ಮಾಡಲಿ. ಪರಿಸ್ಥಿತಿ ನಿಯಂತ್ರಣಕ್ಕೆ ಬರದಿದ್ದರೆ ಲಾಠಿ ಜಾರ್ಜ್ ಮಾಡಿಸೋಣ. ಅನಂತರವಷ್ಟೇ ರಾಜೀನಾಮೆ ಕೊಡುತ್ತೇನೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿಸಿ ಇತ್ತೀಚೆಗೆ ದೆಹಲಿಯ ಜಂತರ್ ಮಂತರ್ ನಲ್ಲಿ ನಡೆದ ಪ್ರತಿಭಟನೆ ನಡೆದ ರೀತಿ ಮಾಡಲಿ. ಬಿಜೆಪಿ ಸರ್ಕಾರ ಇದ್ದಾಗ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ನಡೆದಿಲ್ಲವೇ ಆಗ ಯಾಕೆ ಬಸವರಾಜ ಬೊಮ್ಮಾಯಿ ಹಾಗೂ ಆರಗ ಜ್ಞಾನೇಂದ್ರ ಅವರು ರಾಜೀನಾಮೆ ನೀಡಲಿಲ್ಲ.

## ಇನ್ಸ್‌ಪೆಕ್ಟರ್, ಡಿವೈಎಸ್‌ಪಿ ವರ್ಗಾವಣೆ ನಿಯಮ ಪರಿಷ್ಕರಣೆ, ಕೂಲಿಂಗ್-ಆಫ್ ಅವಧಿ 5 ವರ್ಷಗಳ ಜಾರಿ

• ಉದಯವಾಹಿನಿ, ಬೆಂಗಳೂರು

ಪೊಲೀಸ್ ಇಲಾಖೆಯಲ್ಲಿ ಪ್ರಭಾವಿ ಹುದ್ದೆಗಳಿಗಾಗಿ ನಡೆಯುವ ರಾಜಕೀಯ ಶಿಫಾರಸು ಹಾಗೂ ಲಾಬಿಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಡೆಪ್ಯುಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ಹುದ್ದೆಗಳ ವರ್ಗಾವಣೆ ನಿಯಮಾವಳಿಗಳನ್ನು ಗೃಹ ಇಲಾಖೆ ಪರಿಷ್ಕರಿಸಿದ್ದು, ಕಡ್ಡಾಯ ಐದು ವರ್ಷಗಳ ಕೂಲಿಂಗ್-ಆಫ್ ಅವಧಿ ನಿಯಮವನ್ನು ಜಾರಿಗೆ ತಂದಿದೆ. ಹೊಸ ಮಾರ್ಗಸೂಚಿಯ ಪ್ರಕಾರ, ಬಡ್ತಿ ಪಡೆದ ಡಿವೈಎಸ್ಪಿಗಳು ಕಾರ್ಯನಿರ್ವಾಹಕ ಹುದ್ದೆಗೆ ಅರ್ಹರಾಗಲು ಮೊದಲು ಕಾರ್ಯನಿರ್ವಾಹಕೇತರ ಹುದ್ದೆಯಲ್ಲಿ ಕನಿಷ್ಠ ಎರಡು ವರ್ಷ ಸೇವೆ ಸಲ್ಲಿಸಿರಬೇಕು.ಇದೇ ರೀತಿ, ಬಡ್ತಿ ಪಡೆದ ಪೊಲೀಸ್ ಇನ್ಸ್‌ಪೆಕ್ಟರ್‌ಗಳು ಕೂಡ ಕಾರ್ಯನಿರ್ವಾಹಕೇತರ ಜವಾಬ್ದಾರಿಗಳಲ್ಲಿ ಎರಡು ವರ್ಷ ಪೂರ್ಣಗೊಳಿಸಿದ ಬಳಿಕವೇ ಕಾರ್ಯನಿರ್ವಾಹಕ ಹುದ್ದೆಗೆ ನೇಮಕವಾಗಲು ಅರ್ಹರಾಗುತ್ತಾರೆ.

## ಸಿದ್ದರಾಮಯ್ಯಗೆ 79ನೇ ಜನ್ಮ ದಿನದ ಸಂಭ್ರಮ; ಗಣ್ಯರಿಂದ ಶುಭಾಶಯ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಇಂದು 79 ನೇ ಜನ್ಮದಿನದ ಸಂಭ್ರಮ. ಸಿದ್ದರಾಮಯ್ಯ ಅವರ ಹುಟ್ಟು ಹಬ್ಬಕ್ಕೆ ಅಭಿಮಾನಿಗಳು ರಾಜಕೀಯ ನಾಯಕರು ಸೇರಿದಂತೆ ಅನೇಕ ಗಣ್ಯರು ಶುಭ ಕೋರಿದ್ದಾರೆ. ಆಗಸ್ಟ್ 3 ರಂದು 1948 ರಂದು ಮೈಸೂರು ಜಿಲ್ಲೆಯ ಸಿದ್ದರಾಮನಹುಂಡಿ ಗ್ರಾಮದಲ್ಲಿ ಜನಿಸಿದ ಸಿದ್ದರಾಮಯ್ಯ, ಶಾರದಾ ವಿಲಾಸ ಕಾನೂನು ಕಾಲೇಜಿನಿಂದ 1972 ರಲ್ಲಿ ಕಾನೂನು ಪದವಿಯನ್ನು ಪಡೆದುಕೊಂಡಿದ್ದಾರೆ. ವಕೀಲ ವೃತ್ತಿಯಲ್ಲಿದ್ದರೂ ಇವರನ್ನು ಸೆಳೆದಿದ್ದು ಮಾತ್ರ ರಾಜಕೀಯ. ಸಮಾಜವಾದಿ ಚಿಂತಕ ಡಾ. ರಾಮ್ ಮನೋಹರ್ ಲೋಹಿಯಾ ಅವರ ಸಿದ್ಧಾಂತಗಳಿಂದ ಪ್ರೇರಿತರಾಗಿ, ವಕೀಲಿ ವೃತ್ತಿ ಬಿಟ್ಟು ರೈತ ಚಳವಳಿಗಳ ಮೂಲಕ ಸಾರ್ವಜನಿಕ ಜೀವನಕ್ಕೆ ಬಂದರು. 1978 ರಲ್ಲಿ ಮೈಸೂರು ತಾಲ್ಲೂಕು ಅಭಿವೃದ್ಧಿ ಮಂಡಳಿ ಸದಸ್ಯರಾಗಿ ಮೊದಲ ಬಾರಿಗೆ ಆಯ್ಕೆಯಾದರು. 1983 ರಲ್ಲಿ ಮೈಸೂರಿನ ಚಾಮುಂಡೇಶ್ವರಿ ಕ್ಷೇತ್ರದಿಂದ ಭಾರತೀಯ ಲೋಕದಳ ಟಿಕೆಟ್‌ನಿಂದ ಸ್ಪರ್ಧಿಸಿ ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸಿದರು. 2008 ರಿಂದ 2013 ರವರೆಗೆ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸಿದರು.

2013ರ ಚುನಾವಣೆಯಲ್ಲಿ ಕಾಂಗ್ರೆಸ್ ಬಹುಮತ ಪಡೆದಾಗ ರಾಜ್ಯದ 16ನೇ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡರು. ಎರಡನೇ ಬಾರಿಗೆ 2023 ರ ವಿಧಾನಸಭಾ ಚುನಾವಣೆಯಲ್ಲಿ ವರುಣಾ ಕ್ಷೇತ್ರದಿಂದ ಗೆದ್ದು, ಕಾಂಗ್ರೆಸ್ ಹೈಕಮಾಂಡ್ ನಿರ್ಧಾರದಂತೆ ಎರಡನೇ ಬಾರಿಗೆ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸಿದರು.

ಸುಮಾರು 12 ವಿಧಾನಸಭಾ ಚುನಾವಣೆಗಳಲ್ಲಿ ಸ್ಪರ್ಧಿಸಿ 9 ಬಾರಿ ಜಯಗಳಿಸಿರುವ ಸಿದ್ದರಾಮಯ್ಯ ಅವರು, ಮೇ 28, 2026 ರಂದು ಹೈಕಮಾಂಡ್ ಸೂಚನೆಯಂತೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದರು.

## ಸಿದ್ದು ಸಂಪುಟದ 12 ಸಚಿವರಿಗೆ ಕೊಕ್; ಹಿರಿಯರಿಗೂ ಕೈತಪ್ಪಿದ ಸಚಿವ ಸ್ಥಾನ..!

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸಚಿವ ಸಂಪುಟದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಹಲವು ಹಿರಿಯ ನಾಯಕರನ್ನು ಕೈಬಿಡಲಾಗಿದೆ.ಸಿದ್ದರಾಮಯ್ಯ ಸಂಪುಟದ ಒಟ್ಟು 12 ನಾಯಕರನ್ನು ಸಂಪುಟದಿಂದ ಕೈಬಿಡಲಾಗಿದ್ದು, ಸಚಿವ ಸ್ಥಾನ ಕಳೆದುಕೊಂಡವರ ಪಟ್ಟಿಯಲ್ಲಿ ಹಿರಿಯ ನಾಯಕರು ಹಾಗೂ ಹಲವು ಪ್ರಭಾವಿ ಸಚಿವರು ಸೇರಿರುವುದು ರಾಜಕೀಯ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಸಂಪುಟ ಪುನಾರಚನೆಯ ಮೂಲಕ ಪ್ರಾದೇಶಿಕ ಸಮತೋಲನ, ಜಾತಿ ಸಮೀಕರಣ ಹಾಗೂ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಈ ಬದಲಾವಣೆ ಮಾಡಲಾಗಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

# ಬೆಂಗಳೂರಿಗರೇ ಗಮನಿಸಿ; ಲೋಕಭವನದಲ್ಲಿ ಸಚಿವರ ಪ್ರಮಾಣವಚನ, ಹಲವೆಡೆ ಸಂಚಾರ ನಿರ್ಬಂಧ

## ಬೆಂಗಳೂರಿನಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಹಲವು ಬದಲಾವಣೆ;

• ಉದಯವಾಹಿನಿ, ಬೆಂಗಳೂರು

ಬಾರೀ ಕುತೂಹಲ ಮೂಡಿಸಿದ್ದ ಸಿಎಂ ಡಿಕೆ ಶಿವಕುಮಾರ್ ಸಚಿವ ಸಂಪುಟ ವಿಸ್ತರಣೆ ಕಸರತ್ತು ಕುತೂಹಲಕ್ಕೆ ತೆರೆ ಬಿದ್ದಿದ್ದು, ನೂತನ ಸಚಿವರ ಪಟ್ಟಿ ಹೊರ ಬಿದ್ದಿದೆ. ಲೋಕಭವನದಲ್ಲಿ ಇಂದು ಸಂಜೆ 4 ಗಂಟೆಗೆ ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮ ನಡೆಯಲಿದೆ. ಈ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಹಲವು ಬದಲಾವಣೆ ಮಾಡಲಾಗಿದೆ. ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ಕೆಲ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿದ್ದು, ಮಧ್ಯಾಹ್ನ 2ರಿಂದ ರಾತ್ರಿ 10ರವರೆಗೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಭಾರಿ ವಾಹನಗಳ ಸಂಚಾರಕ್ಕೂ ನಿಷೇಧ ಹೇರಲಾಗಿದೆ. ಕಾರ್ಯಕ್ರಮಕ್ಕೆ ಅನುಮತಿ ಹೊಂದಿರುವ ವಾಹನಗಳನ್ನು ಹೊರತುಪಡಿಸಿ, ಕಬ್ಬನ್ ರಸ್ತೆಯ ಬಿ.ಆರ್.ವಿ ಜಂಕ್ಷನ್‌ನಿಂದ ಸಿ.ಟಿ.ಒ ಜಂಕ್ಷನ್ ಹಾಗೂ ಅಲ್ಲಿಂದ ಲೋಕಭವನದವರೆಗೆ ಎಲ್ಲಾ ಮಾದರಿಯ ವಾಹನಗಳ ಸಂಚಾರ ನಿರ್ಬಂಧಿಸಲಾಗಿದೆ.

ಅದೇ ರೀತಿ ಬಾಳೇಕುಂದ್ರಿ ಜಂಕ್ಷನ್‌ನಿಂದ ಅಂಬೇಡ್ಕರ್ ರಸ್ತೆ ಕಡೆಗೆ ಬರುವ ವಾಹನಗಳು, ಡಾ. ಬಿ.ಆರ್. ಅಂಬೇಡ್ಕರ್ ರಸ್ತೆಯಲ್ಲಿ ಕೆ.ಆರ್. ಸರ್ಕಲ್‌ನಿಂದ ಕಾಫಿ ಬೋರ್ಡ್ ಜಂಕ್ಷನ್ ವರೆಗೆ ಸಂಚರಿಸುವ ವಾಹನಗಳಿಗೂ ನಿರ್ಬಂಧ ಅನ್ವಯಿಸಲಿದೆ. ಕ್ವೀನ್ಸ್ ಜಂಕ್ಷನ್‌ನಿಂದ ಸಿ.ಟಿ.ಒ ಕಡೆಗೆ ಹಾಗೂ ಸೇಂಟ್ ಮಾರ್ಕ್ಸ್ ರಸ್ತೆಯಿಂದ ಸಿ.ಟಿ.ಒ ಜಂಕ್ಷನ್ ಕಡೆಗೆ ಬರುವ ವಾಹನಗಳ ಸಂಚಾರಕ್ಕೂ ನಿರ್ಬಂಧ ವಿಧಿಸಲಾಗಿದೆ. ಇದಕ್ಕೆ ಪರ್ಯಾಯವಾಗಿ ಕಬ್ಬನ್ ರಸ್ತೆಯ ಬಿ.ಆರ್.ವಿ ಜಂಕ್ಷನ್‌ನಿಂದ ಸಿ.ಟಿ.ಒ ಮತ್ತು ಲೋಕಭವನದ ಕಡೆಗೆ ತೆರಳುವವರು



ಉದಯವಾಹಿನಿ ಚಿತ್ರ

ಶಿವಾಜಿನಗರದ ಕಡೆ ತಿರುಗಿ ಅನಿಲ್ ಕುಂಬ್ಳೆ ಜಂಕ್ಷನ್ ಮೂಲಕ ಸಂಚರಿಸಬಹುದಾಗಿದೆ. ಕ್ವೀನ್ಸ್ ರಸ್ತೆ ಮತ್ತು ಶಿವಾಜಿನಗರ ಕಡೆಯಿಂದ ಬರುವ ವಾಹನಗಳು ಬಾಳೇಕುಂದ್ರಿ ಜಂಕ್ಷನ್‌ನಲ್ಲಿ ಕನ್ನಿಂಗ್ ಹ್ಯಾಮ್ ರಸ್ತೆ ಮೂಲಕ ತೆರಳಬಹುದು. ಕೆ.ಆರ್. ಸರ್ಕಲ್‌ನಿಂದ ಕಾಫಿ ಬೋರ್ಡ್ ಜಂಕ್ಷನ್ ಕಡೆಗೆ ಹೋಗುವ ವಾಹನಗಳು ನೃಪತುಂಗ ರಸ್ತೆ ಬಳಸುವಂತೆ ಸೂಚಿಸಲಾಗಿದೆ. ಕ್ವೀನ್ಸ್ ಜಂಕ್ಷನ್‌ನಿಂದ ಲೋಕಭವನದ ಕಡೆಗೆ ತೆರಳುವ ವಾಹನಗಳು ಅನಿಲ್ ಕುಂಬ್ಳೆ ಹಾಗೂ ಬಿ.ಆರ್.ವಿ ಜಂಕ್ಷನ್ ಮಾರ್ಗವಾಗಿ ಸಂಚರಿಸಬಹುದು.ಬೆಂಗಳೂರು ದಕ್ಷಿಣ ವಲಯದಲ್ಲಿ ಸುಮಾರು 290 ಎಕರೆ ಸರ್ಕಾರಿ ಗೋಮಾಳ ಜಮೀನು ಒತ್ತುವರಿ ಮಾಡಲಾಗಿದೆ ಎಂಬ ಆರೋಪದ ಬಗ್ಗೆ ಪರಿಶೀಲನೆ ನಡೆಸಲು ರಾಜ್ಯ ಸರ್ಕಾರವು ಜುಲೈ 17ರಂದು ವಿಶೇಷ ತನಿಖಾ ತಂಡ ರಚಿಸಿ ಆದೇಶ ಹೊರಡಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಟ್ರಸ್ಟ್ ಹೈಕೋರ್ಟ್ ಮೆಟ್ಟಿಲೇರಿತ್ತು.

## ಈ ರಸ್ತೆಗಳಲ್ಲಿ ಪಾರ್ಕಿಂಗ್ ನಿಷೇಧ

ಡಾ. ಬಿ.ಆರ್. ಅಂಬೇಡ್ಕರ್ ರಸ್ತೆ, ಲೋಕಭವನ ರಸ್ತೆ, ಎಲ್.ಎಚ್. ರಸ್ತೆ, ಕ್ವೀನ್ಸ್ ರಸ್ತೆ, ಪ್ಯಾಲೇಸ್ ರಸ್ತೆ, ಕಬ್ಬನ್ ಉದ್ಯಾನವನದ ಒಳಭಾಗದ ರಸ್ತೆಗಳು, ಮಿಲ್ಲರ್ ರಸ್ತೆ, ಇನ್‌ಫ್ಯಾಂಟ್ರಿ ರಸ್ತೆ, ಕೆ.ಜಿ. ರಸ್ತೆ, ನೃಪತುಂಗ ರಸ್ತೆ, ಕಸ್ತೂರಿಬಾ ರಸ್ತೆ ಹಾಗೂ ಕಬ್ಬನ್ ರಸ್ತೆ ಸೇರಿದಂತೆ ಸೂಚಿಸಲಾದ ಹಲವು ರಸ್ತೆಗಳಲ್ಲಿ ವಾಹನ ನಿಲುಗಡೆಗೆ ನಿರ್ಬಂಧ ಹೇರಲಾಗಿದೆ. ಪಾಸ್ ಹೊಂದಿರುವ ವಾಹನಗಳಿಗೆ ವಿಧಾನಸೌಧ ಸಿಮೆಂಟ್ ಪಾರ್ಕಿಂಗ್, ವಿಕಾಸಸೌಧ ಸುತ್ತಮುತ್ತ, ರಾಜಭವನ ಹಿಂಭಾಗದ ಎಲ್.ಎಚ್. ಪಾರ್ಕಿಂಗ್ ಹಾಗೂ ನೆಹರು ತಾರಾಲಯ ಆವರಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.ಪಾಸ್ ಇಲ್ಲದ ವಾಹನಗಳಿಗೆ ಕೊಂಡಜ್ಜಿ ಭವನ, ಶಿವಾಜಿನಗರ ಬಸ್ ನಿಲ್ದಾಣದ ಮಲ್ಟಿ ಲೆವೆಲ್ ಪಾರ್ಕಿಂಗ್, ಕಂಠೀರವ ಕ್ರೀಡಾಂಗಣ, ಯು.ಬಿ. ಸಿಟಿ ಪಾರ್ಕಿಂಗ್, ಸರ್ಕಾರಿ ಕಲಾ ಕಾಲೇಜು ಆವರಣ, ಕಾರ್ಪೊರೇಷನ್ ಕಚೇರಿ ಸ್ಥಳ ಹಾಗೂ ಪ್ಯಾಲೇಸ್ ಮೈದಾನದ ಗೇಟ್ ಸಂಖ್ಯೆ 2, 3 ಮತ್ತು 4ರಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ. ಇದರ ಜೊತೆಗೆ, ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಭಾರಿ ವಾಹನಗಳ ಸಂಚಾರವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ: 25 ಮಂದಿ ರಕ್ತದಾನ

• ಉದಯವಾಹಿನಿ, ಗುಂಡ್ಲುಪೇಟೆ

ಸಾರ್ವಜನಿಕರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಅಮೂಲ್ಯ ಜೀವ ಉಳಿಸಲು ಕೈಜೋಡಿಸಬೇಕು ಎಂದು ಆರೋಗ್ಯಾಧಿಕಾರಿ ಡಾ. ಅಲೀಂ ಪಾಷಾ ಕರೆ ನೀಡಿದರು. ಪಟ್ಟಣದ ಜಾರಕಿಹೊಳಿ ಬ್ರಿಗೇಡ್ ಕಚೇರಿಯಲ್ಲಿ ಜಾರಕಿಹೊಳಿ ಬ್ರಿಗೇಡ್ ಹಾಗೂ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯ ರಕ್ತ ಶೇಖರಣಾ ಘಟಕದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನ ಉದ್ಘಾಟಿಸಿ ಅವರು ಮಾತನಾಡಿದರು. ರಕ್ತದಾನವು ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೂ ಸಕಾರಾತ್ಮಕ ಪರಿಣಾಮ ಬೀರುತ್ತದೆ. ದೇಶದಲ್ಲಿ ಪ್ರತಿವರ್ಷ ಸುಮಾರು 41 ದಶಲಕ್ಷ ಯುನಿಟ್ ರಕ್ತದ ಕೊರತೆ ಎದುರಾಗುತ್ತಿದ್ದು, ಸಮಯಕ್ಕೆ ಸರಿಯಾಗಿ ರಕ್ತ ದೊರೆಯದೆ ಅಪಘಾತಗಳಲ್ಲಿ ಗಾಯಗೊಂಡವರು ಹಾಗೂ ವಿವಿಧ ಮಾರಣಾಂತಿಕ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳು ಜೀವ ಕಳೆದುಕೊಳ್ಳುತ್ತಿದ್ದಾರೆ. ಆದ್ದರಿಂದ ಆರೋಗ್ಯವಂತರಾದ ಪ್ರತಿಯೊಬ್ಬರೂ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ


ಉದಯವಾಹಿನಿ ಚಿತ್ರ

ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಜಾರಕಿಹೊಳಿ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ಗೋವಿನಾಯಕ್ ಮಾತನಾಡಿ, ಒಬ್ಬ ವ್ಯಕ್ತಿ ನೀಡುವ ರಕ್ತದಿಂದ ಮೂರು ಮಂದಿಯ ಜೀವ ಉಳಿಸಲು ಸಾಧ್ಯವಾಗುತ್ತದೆ. ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲ. ರಕ್ತದಾನದ ಕುರಿತು ಜನರಲ್ಲಿ ಇರುವ ತಪ್ಪು ಕಲ್ಪನೆಗಳನ್ನು ದೂರ ಮಾಡಬೇಕಿದ್ದು, ವಿಶೇಷವಾಗಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಶಿಬಿರಗಳಲ್ಲಿ ಭಾಗವಹಿಸಬೇಕು ಎಂದು ಹೇಳಿದರು. ಜಾರಕಿಹೊಳಿ ಬ್ರಿಗೇಡ್ ವತಿಯಿಂದ ಎರಡನೇ ಬಾರಿಗೆ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನ ಆಯೋಜಿಸಲಾಗಿದ್ದು, 30 ಮಂದಿ ಹೆಸರು ನೋಂದಾಯಿಸಿಕೊಂಡಿದ್ದರು.

ಅವರಲ್ಲಿ 25 ಮಂದಿ ಯಶಸ್ವಿಯಾಗಿ ರಕ್ತದಾನ ಮಾಡಿದರು ಎಂದು ತಿಳಿಸಿದರು. ಶಿಬಿರದಲ್ಲಿ ಹಿರಿಯ ಪ್ರಯೋಗಶಾಲಾ ತಂತ್ರಜ್ಞ ಸತ್ಯ, ಡಾ. ಸೌಮ್ಯ, ಮಹದೇವಸ್ವಾಮಿ, ಚಿತ್ರ, ಸಾರ್ವಜನಿಕ ಆಸ್ಪತ್ರೆಯ ಲ್ಯಾಬ್ ಟೆಕ್ನಿಷಿಯನ್ ನೇತ್ರಾ, ಹಾಗೂ ಮುಖಂಡರಾದ ನಾಗೇಂದ್ರ, ಕ್ರೇಜಿ ನಾಗರಾಜು, ರಾಜೇಂದ್ರ ವಿ. ನಾಯಕ್, ರಮೇಶ್, ಮೋನಿಷ್, ವಿನು ನಾಯಕ್, ಗಿರೀಶ್, ರವಿ, ಧನುಷ್, ಮನು, ಹರ್ಷ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಚಿವ ಸ್ಥಾನ ಸಿಗದಿದ್ದಕ್ಕೆ ತನ್ವೀರ್ ಸೇಠ್ ಅಸಮಾಧಾನ

## ಮೈಸೂರು ನಗರ ಹಾಗೂ ಜಿಲ್ಲೆಗೆ ಸೇವೆ ಮಾಡುವ ಅವಕಾಶ ಕಸಿದುಕೊಳ್ಳಲಾಗಿದೆ. ಅಭಿಮಾನಿಗಳು ರಾಜೀನಾಮೆ ನೀಡುವಂತೆ ಒತ್ತಾಯಿಸುತ್ತಿದ್ದಾರೆ

• ಉದಯವಾಹಿನಿ, ಮೈಸೂರು

ರಾಜ್ಯ ಸರ್ಕಾರದಲ್ಲಿ ಈ ಬಾರಿಯು ಸಚಿವ ಸ್ಥಾನ ಸಿಗದೇ ಇರುವುದಕ್ಕೆ, ಮಾಜಿ ಸಚಿವ, ಶಾಸಕರೂ ಆದ ತನ್ವೀರ್ ಸೇಠ್ ಅಸಮಾಧಾನ ಹೊರಹಾಕಿದರು. ಉದಯಗಿರಿಯಲ್ಲಿರುವ ತಮ್ಮ ನಿವಾಸದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನನ್ನ ಆಸೆ ಈ ಬಾರಿಯೂ ನಿರಾಸೆಯಾಗಿದೆ. ಹೈಕಮಾಂಡ್ ನೀಡಿದ್ದ ಭರವಸೆ ಹುಸಿಯಾಗಿದೆ. ಈಗ ನನ್ನ ಮುಂದಿನ ನಡೆ ಕಾರ್ಯಕರ್ತರ ತೀರ್ಮಾನಕ್ಕೆ ಬದ್ಧ ಎಂದು ಸ್ಪಷ್ಟಪಡಿಸಿದರು.

ದೆಹಲಿ ಹೋಗಿ ಲಾಬಿ ಮಾಡಲಿಲ್ಲ, ಈಗಲೂ ಮಾಡುವುದಿಲ್ಲ. ಪಕ್ಷ ನಮ್ಮನ್ನು ಕಡೆಗಣಿಸಿದೆ. ನನ್ನ ಅವಕಾಶ ತಪ್ಪಲು ರಾಜ್ಯದ ಕೆಲ ನಾಯಕರ ಕೈವಾಡವಿದೆ. ಹೈಕಮಾಂಡ್‌ನಿಂದ ನನಗೆ ಯಾವುದೇ ಅನ್ಯಾಯವಾಗಿಲ್ಲ, ತಪ್ಪು ರಾಜ್ಯ ನಾಯಕರಿಂದಾಗಿದೆ. ಯಾರಿಂದ ಅವಕಾಶ ತಪ್ಪಿದೆ ಎಂಬುದು ಶೀಘ್ರದಲ್ಲೇ ಬಹಿರಂಗವಾಗಲಿದೆ ಎಂದು ಕಿಡಿಕಾರಿದರು.

ಎಐಸಿಸಿ ಮುಖಂಡರಾದ ರಾಹುಲ್ ಗಾಂಧಿ ಕುರಿತು ಹೇಳಲಾದ ಒಂದೇ ಒಂದು ಪದಕ್ಕೆ ರಾಜಣ್ಣ ಅವರು ಸ್ಥಾನ ಕಳೆದುಕೊಂಡರು. ಆದರೆ, ಪಕ್ಷದ ವಿರುದ್ಧ ಬಹಿರಂಗವಾಗಿ ಮಾತನಾಡಿದವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ನಾನು ಯಾರ ವಿರುದ್ಧವೂ ವೈಯಕ್ತಿಕವಾಗಿ ಮಾತನಾಡುವುದಿಲ್ಲ. ಅದಕ್ಕೂ ಒಂದು ಕಾಲ ಬರುತ್ತದೆ. ನನ್ನ ಕೋಪ, ನೋವು ಮತ್ತು ಬೇಸರವನ್ನು ಯಾವುದೇ ಪದಗಳಲ್ಲಿ ವ್ಯಕ್ತಪಡಿಸದೇ ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಯಾಗಿ ಉಳಿದಿದ್ದೇನೆ ಎಂದು ಹೇಳಿದರು. ಯಾವುದೇ ನಿಗಮ - ಮಂಡಳಿ ಸ್ಥಾನವೂ ಬೇಡ ಎಂದು ಹೇಳಿದ್ದೆ. ಎರಡೂವರೆ ವರ್ಷದ ಬಳಿಕ ಸಚಿವ ಸ್ಥಾನ ಸಿಗುತ್ತದೆ ಎಂಬ ಭರವಸೆ ನೀಡಲಾಗಿತ್ತು.


ಉದಯವಾಹಿನಿ ಚಿತ್ರ

**ಕಾರ್ಯಕರ್ತರ ಜೊತೆ ಚರ್ಚೆ** ಮೈಸೂರು ನಗರ ಹಾಗೂ ಜಿಲ್ಲೆಗೆ ಸೇವೆ ಮಾಡುವ ಅವಕಾಶ ಕಸಿದುಕೊಳ್ಳಲಾಗಿದೆ. ಅಭಿಮಾನಿಗಳು ರಾಜೀನಾಮೆ ನೀಡುವಂತೆ ಒತ್ತಾಯಿಸುತ್ತಿದ್ದಾರೆ. ಕಾರ್ಯಕರ್ತರ ಜೊತೆ ಚರ್ಚಿಸಿ ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ. ಪಕ್ಷದ ಮೇಲೆ ಇದ್ದ ನಂಬಿಕೆ ಕುಸಿದಿದೆ ಎಂದು ಆಕ್ರೋಶ ಹೊರಹಾಕಿದರು.

**ಮತ್ತೊಂದು ಕಡೆ ಅವರ ಅಭಿಮಾನಿಗಳು ಬೆಂಗಳೂರು-ಮೈಸೂರು ರಸ್ತೆಯ ಮಣಿಪಾಲ್ ಸರ್ಕಲ್‌ನಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಪ್ರತಿಭಟನಾಕಾರರನ್ನು ಪೊಲೀಸರು ತಮ್ಮ ವಶಕ್ಕೆ ಪಡೆದ ಘಟನೆ ನಡೆದಿದೆ. ಈಗ ಶಾಸಕ ತನ್ವೀರ್ ಸೇಠ್ ಕ್ಷೇತ್ರದಲ್ಲಿ ಪರಿಸ್ಥಿತಿ ಬಿಗುವಿನಿಂದ ಕೂಡಿದ್ದು ಬಿಗಿ ಪೊಲೀಸ್ ಬಂದೋಬಸ್ತ್ ಹಾಕಲಾಗಿದೆ.**

ಆದರೆ ಆ ವಿಶ್ವಾಸವನ್ನು ಪಕ್ಷವೇ ಹುಸಿಗೊಳಿಸಿದೆ. ನಮ್ಮ ಜಿಲ್ಲೆಯವರೇ ಮುಖ್ಯಮಂತ್ರಿ ಆಗಿರುವ ಕಾರಣ ಸಚಿವ ಸ್ಥಾನ ನೀಡಲು ಸಾಧ್ಯವಿಲ್ಲ ಎಂದು ಹೇಳಿದಾಗಲೂ ಮೌನವಾಗಿದ್ದೆ ಎಂದು ಅಸಮಾಧಾನ ಹೊರಹಾಕಿದರು. ಕೊನೆಗೆ, ಇತ್ತೀಚಿನ ರಾಜಕಾರಣ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ತಮ್ಮ ನಾಯಕನಿಗೆ ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಬೇಸರಗೊಂಡಿರುವ ಅವರ ಕಾರ್ಯಕರ್ತನೊಬ್ಬ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ಆತ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ತಬ್ರೇಜ್ ವಿಷ ಸೇವಿಸಿದ ತನ್ವೀರ್ ಸೇಠ್ ಬೆಂಬಲಿಗ. ಸದ್ಯ ಆತನ ಆರೋಗ್ಯ ಸ್ಥಿರವಾಗಿದೆ ಎಂದು ಹೇಳಲಾಗಿದೆ.

## ಸಚಿವ ಸ್ಥಾನ ದೊರೆಯದಿದ್ದಕ್ಕೆ ಅಸಮಾಧಾನ:ಮೊಬೈಲ್ ಸ್ವಿಚ್ ಆಫ್ ಮಾಡಿದ ಸುಬ್ಬಾರೆಡ್ಡಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಚಿವ ಸ್ಥಾನ ದೊರೆಯದಿರುವುದಕ್ಕೆ ತೀವ್ರ ಅಸಮಾಧಾನಗೊಂಡಿರುವ ಬಾಗೇಪಲ್ಲಿ ಶಾಸಕ ಎಸ್.ಎಸ್.ಸುಬ್ಬಾರೆಡ್ಡಿ ಮೊಬೈಲ್ ಸ್ವಿಚ್ ಆಫ್ ಮಾಡಿದ್ದಾರೆ. ಬಾಗೇಪಲ್ಲಿಯಲ್ಲಿ ಪ್ರತಿಭಟನೆ ನಡೆಸಲು ಸುಬ್ಬಾರೆಡ್ಡಿ ಬೆಂಬಲಿಗರು ಸಿದ್ಧತೆ ನಡೆಸಿದ್ದಾರೆ.

ಬೆಳಿಗ್ಗೆ ಅವರ ಮೊಬೈಕ್ ಸ್ವಿಚ್ ಆನ್ ಇತ್ತು. ಸಚಿವರ ಪಟ್ಟಿ ಹೊರ ಬೀಳುತ್ತಲೇ ಮೊಬೈಲ್ ಸ್ವಿಚ್ ಆಫ್ ಮಾಡಿದರು. ಸಚಿವ ಸ್ಥಾನ ದೊರೆಯದಿರುವುದಕ್ಕೆ ತೀವ್ರ ಅಸಮಾಧಾನಗೊಂಡಿದ್ದಾರೆ ಎಂದು ಅವರ ಆಪ್ತರು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

ಮೂರು ಬಾರಿ ಶಾಸಕರಾಗಿರುವ ಸುಬ್ಬಾರೆಡ್ಡಿ, ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದರು. ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಸ್ಥಾನ ದೊರೆಯದಿದ್ದಾಗ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ನಂತರ ಅವರಿಗೆ ರಾಜ್ಯ ಬೀಜ ನಿಗಮದ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. 'ನನಗೆ ಯಾವುದೇ ನಿಗಮ, ಮಂಡಳಿಗಳ ಅಧ್ಯಕ್ಷ ಸ್ಥಾನ ಬೇಡ. ಸಚಿವ ಸ್ಥಾನ ಕೊಡಿ' ಎಂದು ನಿಗಮದ ಅಧ್ಯಕ್ಷ ಸ್ಥಾನ ನಿರಾಕರಿಸಿ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದರು.

ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಿ ಸಚಿವ ಸ್ಥಾನ ದೊರೆಯುತ್ತದೆ ಎಂದು ಪದೇ ಪದೇ ಅಚಲ ವಿಶ್ವಾಸ ಸಹ ವ್ಯಕ್ತಪಡಿಸುತ್ತಿದ್ದರು. ಆದರೆ ಈಗ ಅವರಿಗೆ ಸಚಿವ ಸ್ಥಾನ ತಪ್ಪಿದೆ. ಮಾಜಿ ಸಚಿವ ಎಚ್.ಎನ್.ಶಿವಶಂಕರ ರೆಡ್ಡಿ ನೇತೃತ್ವದ ಗುಂಪು ವರಿಷ್ಠರನ್ನು ಭೇಟಿ ಮಾಡಿ ಸುಬ್ಬಾರೆಡ್ಡಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಕೋರಿತ್ತು. ಸುಬ್ಬಾರೆಡ್ಡಿ ಅವರು ಸಹ ಸಚಿವ ಸ್ಥಾನಕ್ಕೆ ಪದೇ ಪದೇ ನವದೆಹಲಿ ಯಾತ್ರೆ ನಡೆಸಿದ್ದರು

## ಫುಟ್ಬಾತ್ ಒತ್ತುವರಿ ತೆರವು ಪೊಲೀಸ್ ಬಂದೋಬಸ್ತ್

• ಉದಯವಾಹಿನಿ, ಹನೂರು

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ನಗರಸಭಾ ಆಡಳಿತ ನಿರೀಕ್ಷೆಯಂತೆ ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಜೆಸಿಬಿ ಯಂತ್ರದಿಂದ ಪೊಲೀಸ್ ಬಂದೋಬಸ್ತ್ ನೊಂದಿಗೆ ನಗರಸಭಾ ಪೌರಾಯುಕ್ತ ಸಿ.ಎಂ.ನಟರಾಜು ನೇತೃತ್ವದಲ್ಲಿ ಫುಟ್ ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಯಿತು.ಪಟ್ಟಣದ ಚಿಕ್ಕ ಮಸೀದಿ ವೃತ್ತ, ಕುಮಾರ ಎಲೆಕ್ಟಿಕಲ್ ರಸ್ತೆ, ಚಿನ್ನಬೆಳ್ಳಿ ಅಂಗಡಿ ರಸ್ತೆ, ಎಸ್.ಟಿ. ರಸ್ತೆ, ರಾಜ್ ಕುಮಾರ್ ರಸ್ತೆ, ಬಸ್ತೀಪುರ ಮುಖ್ಯ ರಸ್ತೆ ಸೇರಿದಂತೆ ಹಳೇ ಕುರುಬರ ಬೀದಿಗೆ ಸಂಪರ್ಕ ಕಲ್ಪಿಸುವ ಅರ್ಫ ಹೋಟೇಲ್ ರಸ್ತೆಯಲ್ಲಿ ಮೊದಲ ಹಂತದ ಕಾರ್ಯಾಚರಣೆ ನಡೆಸಿದ ನಗರಸಭಾ ಅಧಿಕಾರಿಗಳು ಒತ್ತುವರಿ ಕಟ್ಟಡ, ಮೇಲ್ಚಾವಣಿ, ಮೆಟ್ಟಿಲುಗಳನ್ನು ತೆರವುಗೊಳಿಸಿದರು.ಈ ನಡುವೆ ಒತ್ತುವರಿ ತೆರವು ಕಾರ್ಯಾಚರಣೆ ಬಿರುಸುಕೊಳ್ಳುತ್ತಿರುವುದನ್ನು ಗಮನಿಸಿದ ಕೆಲವು ವರ್ತಕರು, ಸ್ವಯಂ ಅಂಗಡಿಗಳ ಮೇಲ್ಚಾವಣಿಗಳನ್ನು ತೆರವುಗೊಳಿಸಿಕೊಂಡ ದೃಶ್ಯ ಸಾಮಾನ್ಯವಾಗಿತ್ತು. ಇನ್ನೂ ಕೆಲವು ಅಂಗಡಿ ಮಾಲೀಕರಂತೂ ತಮ್ಮ ಅಂಗಡಿ ಮುಂದಿನ ಒತ್ತುವರಿ ತೆರವುಗೊಳಿಸದಂತೆ ನಗರಸಭಾ ಅಧಿಕಾರಿಗಳೊಂದಿಗೆ ಮಾತಿನ ಚಕಮಕಿ ನಡೆಸಿದ್ದು, ವಿಶೇಷವಾಗಿತ್ತು. ಇದಕ್ಕೆಲ್ಲ ಜಗ್ಗದ ಅಧಿಕಾರಿಗಳು ಕಾರ್ಯಾಚರಣೆ ಕೈಗೊಂಡರು. ನಗರಸಭೆಯ ಎ ಇ.ಇ ಪ್ರಸನ್ನ, ಜೆ.ಇ ಲಕ್ಷ್ಮೀ, ಕಚೇರಿ ವ್ಯವಸ್ಥಾಪಕ ಲಿಂಗ ರಾಜು, ಕಂದಾಯ ನಿರೀಕ್ಷಕರಾದ ಆರ್.ಪ್ರದೀಪ್ ಕುಮಾರ್, ರಮೇಶ್, ರವಿಶಂಕರ್ ಸೇರಿದಂತೆ ಪೌರ ಕಾರ್ಮಿಕರು ಇದ್ದರು.

# ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಬಿಜೆಪಿ ಮೇಲುಗೈ : 14 ಸ್ಥಾನಗಳ ಪೈಕಿ 12ರಲ್ಲಿ ಗೆಲುವು

• ಉದಯವಾಹಿನಿ, ಗುಂಡ್ಲುಪೇಟೆ

ಪಟ್ಟಣದ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ (ಪಿಎಲ್‌ಡಿ) ಬ್ಯಾಂಕ್ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಭರ್ಜರಿ ಗೆಲುವು ಸಾಧಿಸಿದ್ದು ಮತ್ತೊಮ್ಮೆ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಪಟ್ಟಣದ ಜವಹರ್ ಶಿಕ್ಷಣ ಟ್ರಸ್ಟ್ (ನಾಗರತ್ನಮ್ಮ ಶಾಲೆ) ಆವರಣದಲ್ಲಿ ಮತದಾನ ಹಾಗೂ ಮತ ಎಣಿಕೆ ನಡೆಯಿತು. ಒಟ್ಟು 14 ಸ್ಥಾನಗಳ ಪೈಕಿ ಬಿಜೆಪಿ ಬೆಂಬಲಿತರು 12 ಸ್ಥಾನಗಳಲ್ಲಿ ಜಯಗಳಿಸಿ ಸ್ಪಷ್ಟ ಬಹುಮತ ಪಡೆದರು.

**ವಿಜಯಶಾಲಿಯಾದ ಅಭ್ಯರ್ಥಿಗಳು :** ಸಾಲಗಾರರ ಕ್ಷೇತ್ರದಿಂದ ಚಾರುಲತಾ, ಮಾಡ್ರಹಳ್ಳಿ ನಾಗೇಂದ್ರ, ದೇವಮ್ಮ (ಚನ್ನಮಲ್ಲೀಪುರ), ಮಹದೇವಪ್ಪ (ಕಂದೇಗಾಲ), ಜಿ.ಎಂ. ರಾಜು, ಎಸ್.ಎಂ. ಮಲ್ಲಿಕಾರ್ಜುನಪ್ಪ, ಕುಂದಕೆರೆ ಶಿವಸ್ವಾಮಿ, ಪ್ರೇಮ (ಶೆಟ್ಟಹಳ್ಳಿ), ರೇವಣ್ಣ (ಹಂಗಳಾಪುರ), ಶಿವಯ್ಯ (ಕೊಡಸೋಗೆ) ಹಾಗೂ


ಉದಯವಾಹಿನಿ ಚಿತ್ರ

ಸಾಲಗಾರರಲ್ಲದ ಕ್ಷೇತ್ರದಿಂದ ಮಹೇಂದ್ರ, (ಹಳ್ಳದ ಮಾದಹಳ್ಳಿ) ಆಯ್ಕೆಯಾದರು.ಪರಿಶಿಷ್ಟ ಪಂಗಡ ಮೀಸಲು ಸ್ಥಾನಕ್ಕೆ ಬಿಜೆಪಿ ಬೆಂಬಲಿತ ಲಿಂಗನಾಯಕ ಹಾಗೂ ಮಹಿಳಾ ಮೀಸಲು ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಅಂಜುಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದರು. ಕಾಂಗ್ರೆಸ್ ಬೆಂಬಲಿತ ಎಚ್.ವಿ. ಬಸವರಾಜು ಗೆಲುವು ಸಾಧಿಸಿದರು.

**ವಿಜಯೋತ್ಸವ ಸಂಭ್ರಮ :** ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಜಿಲ್ಲಾಧ್ಯಕ್ಷ ಹಾಗೂ ಮಾಜಿ ಶಾಸಕ ಸಿ.ಎಸ್. ನಿರಂಜನ್‌ಕುಮಾರ್ ನೇತೃತ್ವದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು. ತಾಲ್ಲೂಕಿನ ರೈತರ ಸಮಸ್ಯೆಗಳಿಗೆ ಸ್ಪಂದಿಸದ ಸರ್ಕಾರದ ವಿರುದ್ಧ ಅಸಮಾಧಾನಗೊಂಡ ರೈತರು ಬಿಜೆಪಿ ಪರ ಮತ ಚಲಾಯಿಸಿದ್ದಾರೆ. ಕಾರ್ಯಕರ್ತರು ಹಾಗೂ ಅಭ್ಯರ್ಥಿಗಳ ಹಗಲಿರುಳು ಶ್ರಮದ ಫಲವಾಗಿ ಈ ಗೆಲುವು ದೊರೆತಿದೆ. ಪಿಎಲ್‌ಡಿ ಬ್ಯಾಂಕ್ ರೈತರ ಬ್ಯಾಂಕ್ ಆಗಿದ್ದು, ರೈತರಿಗೆ ಗೌರವ ಮತ್ತು ಉತ್ತಮ ಸೇವೆ ನೀಡುವ ಆಡಳಿತವನ್ನ ನೂತನ ಮಂಡಳಿ ನೀಡಲಿದೆ ಎಂದು ಸಿ.ಎಸ್. ನಿರಂಜನ್‌ಕುಮಾರ್ ಹೇಳಿದರು. **ತೀವ್ರ ಪೈಪೋಟಿ :** ಚುನಾವಣೆಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಎರಡೂ ಪಕ್ಷಗಳು ಚುನಾವಣೆಯನ್ನ ಪ್ರತಿಷ್ಠೆಯಾಗಿ ಪರಿಗಣಿಸಿ ಮತದಾರರನ್ನು ಸೆಳೆಯಲು ಅಂತಿಮ ಕ್ಷಣದವರೆಗೂ ಭರ್ಜರಿ ಪ್ರಚಾರ ನಡೆಸಿದವು. ಮತಗಟ್ಟೆ ಬಳಿ ಪ್ರತ್ಯೇಕ ಶಾಮಿಯಾನಗಳನ್ನ ಹಾಕಿ ಬೆಂಬಲಿತ ಅಭ್ಯರ್ಥಿಗಳ ಪರ ಮತಯಾಚನೆ ನಡೆಸಿದರು.

## 36 ಗ್ರಾಮಗಳಲ್ಲಿ ನೀರಿಗೆ ಹಾಹಾಕಾರ ಮಳೆ ಕೊರತೆಯಿಂದ ಸಮಸ್ಯೆ ಬಿಗಡಾಯಿಸಿದೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಬಯಲು ಸೀಮೆಯ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರತಿ ವರ್ಷದ ಬೇಸಿಗೆಯಲ್ಲಿ ನೀರಿನ ಅಭಾವ ತಲೆದೋರುತ್ತದೆ. ಆದರೆ ಈ ಬಾರಿ ಮಳೆ ಕೊರತೆಯ ಕಾರಣ ನೀರಿನ ಸಮಸ್ಯೆ ಮತ್ತಷ್ಟು ಬಿಗಡಾಯಿಸಿದೆ.

ಜಿಲ್ಲೆಯಲ್ಲಿ ಈಗಾಗಲೇ 36 ಗ್ರಾಮಗಳಿಗೆ ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಸಲಾಗುತ್ತಿದೆ. ಮಳೆಯ ಕಣ್ಣಾಮುಚ್ಚಾಲೆ ಇದೇ ರೀತಿ ಮುಂದುವರಿದರೆ ಮತ್ತು ಬರ ತೀವ್ರವಾದರೆ ಈ ಪಟ್ಟಿಗೆ ಇನ್ನೂ 68 ಗ್ರಾಮಗಳು ಸೇರ್ಪಡೆ ಆಗಲಿವೆ. ಈಗಾಗಲೇ ಐದು ಪಂಚಾಯಿತಿಗಳ ವ್ಯಾಪ್ತಿಯ 36 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ಗುಡಿಬಂಡೆ, ಚೇಳೂರು ಮತ್ತು ಮಂಚೇನಹಳ್ಳಿ ಹೊರತುಪಡಿಸಿ ಉಳಿದ ಐದು ತಾಲ್ಲೂಕುಗಳಲ್ಲಿನ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಿಗೆ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆದು ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ಕವರನಹಳ್ಳಿ, ಬೂಮನಹಳ್ಳಿ, ನಕ್ಕಲಹಳ್ಳಿ, ಮಧುರೆನಹಳ್ಳಿ, ಪೆರೇಸಂದ್ರ ಕ್ರಾಸ್, ಚಿಂತಾಮಣಿ ತಾಲ್ಲೂಕಿನ ಶೆಟ್ಟಿಹಳ್ಳಿ, ಮಸಿಲಹಳ್ಳಿ, ಗೌನಹಳ್ಳಿ, ಮಲ್ಲಾಪುರ, ಅನಪಲ್ಲಿ, ರಾಸಪಲ್ಲಿ, ಅಗ್ರಹಾರಹಳ್ಳಿ, ನಂದಿಗಾನಹಳ್ಳಿ, ಉಪ್ಪಾರಲಹಳ್ಳಿ, ಜೋಗಿಗಡ್ಡ, ಬಾಗೇಪಲ್ಲಿ ತಾಲ್ಲೂಕಿನ ಚಾಮಲವಾರಿಪಲ್ಲಿ, ವೀರಪುರ, ಯಲಗಲಪಲ್ಲಿ, ಗುಮ್ಮವಂಡ್ಲಪಲ್ಲಿ, ಪೆದ್ದಿರೆಡ್ಡಿಪಲ್ಲಿ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದೆ.

ಗೌರಿಬಿದನೂರು ತಾಲ್ಲೂಕಿನ ಸಿದ್ದನಹಳ್ಳಿ, ಶಿಡ್ಲಘಟ್ಟ ತಾಲ್ಲೂಕಿನ ವಲ್ಲಪ್ಪನಹಳ್ಳಿ, ಹೇರ್ಮಲಹಳ್ಳಿ, ಗಂಭೀರನಹಳ್ಳಿ, ಜಂಗಮಕೋಟೆ, ಭಕ್ತರಹಳ್ಳಿ, ಪಾಲಿಚೆರ್ಲು, ಸೋಮನಹಳ್ಳಿ, ತಾದೂರು, ಮಿಟ್ಟಹಳ್ಳಿ, ಬೈಯಪ್ಪನಹಳ್ಳಿ, ನಾಮಮಂಗಲ, ಚಿಕ್ಕತೇಕಲಹಳ್ಳಿ, ಬೆಳ್ಳೂಟಿ, ದಬಗಾನಹಳ್ಳಿ, ಇಬ್ಲೂಡು ಗ್ರಾಮದಲ್ಲಿ ನೀರಿನ ಸಮಸ್ಯೆ ಇದೆ.

## ಬಿಡಾಡಿ ದನ, ಬೀದಿನಾಯಿಗಳ ಉಪಟಳ ಹೆಚ್ಚಳ

• ಉದಯವಾಹಿನಿ, ಮಾಗಡಿ

ಪಟ್ಟಣದ ಪ್ರಮುಖ ರಸ್ತೆಗಳು ಮತ್ತು ಬೀದಿಗಳಲ್ಲಿ ಬೀಡಾಡಿ ಜಾನುವಾರು ಹಾಗೂ ಬೀದಿ ನಾಯಿಗಳ ಉಪಟಳ ಹೆಚ್ಚಿದೆ. ಪಾದಚಾರಿಗಳು, ವಾಹನ ಚಾಲಕರು ಮತ್ತು ಬೀದಿಬದಿ ವ್ಯಾಪಾರಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಮಾರುಕಟ್ಟೆ, ಬಸ್ ನಿಲ್ದಾಣ, ಮಾಗಡಿ-ಬೆಂಗಳೂರು ಮುಖ್ಯ ರಸ್ತೆ, ಕೆಂಪೇಗೌಡ ವೃತ್ತ, ಪ್ರಮುಖ ದೇವಸ್ಥಾನಗಳು ಮತ್ತು ಆಸ್ಪತ್ರೆ ಮುಂಭಾಗದಲ್ಲಿ ದನಗಳು ಬೇಕಾಬಿಟ್ಟಿ ಅಲೆದಾಡುತ್ತಿವೆ.

ಬೀದಿ ನಾಯಿಗಳು ಗುಂಪುಗುಂಪಾಗಿ ಸಂಚರಿಸುತ್ತಿರುವುದರಿಂದ ಮಕ್ಕಳು, ಮಹಿಳೆಯರು ಮತ್ತು ವೃದ್ಧರು ಯಾವಾಗ ನಾಯಿ ಕಡಿಯುತ್ತದೆಯೋ ಎಂಬ ಭಯದಲ್ಲೇ ಓಡಾಡುವಂತಾಗಿದೆ.

# 100 ಅಡಿ ದಾಟಿದ ಕೆಆರ್‌ಎಸ್ ನೀರಿನ ಮಟ್ಟ

## ಕಬಿನಿ ಡ್ಯಾಂನಿಂದ ನದಿಗೆ ನೀರು, ಜನರಿಗೆ ಪ್ರವಾಹದ ಎಚ್ಚರಿಕೆ ಕೇರಳದ ವಯನಾಡು ಹಾಗೂ ಕೊಡಗಿನಲ್ಲಿ ಭಾರಿ ಮಳೆ

• ಉದಯವಾಹಿನಿ, ಮೈಸೂರು


1 100 ಅಡಿ ದಾಟಿದ ಕೆಆರ್‌ಎಸ್
2 ಕಬಿನಿ ಸೇತುವೆ ಮುಳುಗಡೆ
3 ಒಟ್ಟು 36,293 ಕ್ಯೂಸೆಕ್

ಕೇರಳಂನ ವಯನಾಡು ಹಾಗೂ ಕೊಡಗಿನಲ್ಲಿ ಭಾರಿ ಮಳೆ ಸುರಿಯುತ್ತಿರುವುದರಿಂದ ಕೆಆರ್‌ಎಸ್ ಜಲಾಶಯಕ್ಕೆ ಅಧಿಕ ನೀರು ಹರಿದು ಬರುತ್ತಿದ್ದು, ನೀರಿನ ಮಟ್ಟ 100 ಅಡಿ ದಾಟಿದೆ. ಮತ್ತೊಂದೆಡೆ ಕಬಿನಿ ಜಲಾಶಯ ಭರ್ತಿಯಾಗಿರುವುದರಿಂದ ಅಧಿಕ ನೀರನ್ನು ನದಿಗೆ ಹರಿಸಲಾಗುತ್ತಿದ್ದು, ನದಿ ಪಾತ್ರದ ಜನರಿಗೆ ಪ್ರವಾಹದ ಎಚ್ಚರಿಕೆ ನೀಡಲಾಗಿದೆ.

ಜುಲೈ ತಿಂಗಳ ಕೊನೆಯಲ್ಲಿ ಕೇರಳದ ವಯನಾಡು ಮತ್ತು ಕೊಡಗಿನಲ್ಲಿ ಸುರಿಯುತ್ತಿರುವ ಭಾರಿ ಮಳೆಯಿಂದ ಕಬಿನಿ, ಕೆಆರ್‌ಎಸ್ ಮತ್ತು ಹಾರಂಗಿ ಜಲಾಶಯಗಳಿಗೆ ನೀರಿನ ಹರಿವು ಹೆಚ್ಚಾಗಿದೆ. ಕಳೆದ 10 ದಿನಗಳ ಹಿಂದೆ ಕೆಆರ್‌ಎಸ್ ಡ್ಯಾಂನಲ್ಲಿ 82 ಅಡಿ ಇದ್ದ ನೀರಿನ ಮಟ್ಟ ಇದೀಗ 100 ಅಡಿ ದಾಟಿದೆ.

ಕೊಡಗಿನ ಹಾರಂಗಿ ಜಲಾಶಯ ಸಂಪೂರ್ಣ ಭರ್ತಿಯಾಗಿದ್ದು, 12 ಸಾವಿರಕ್ಕೂ ಹೆಚ್ಚು ನೀರನ್ನು ಹೊರ ಬಿಡಲಾಗುತ್ತಿದೆ. ಕೆಆರ್‌ಎಸ್ ಜಲಾಶಯದ ಗರಿಷ್ಠ ಮಟ್ಟ 124.80 ಆಗಿದ್ದು. ಜಲಾಶಯದ ನೀರಿನ ಮಟ್ಟ 100 ಅಡಿ ದಾಟಿದೆ. ಹೀಗೆ ಮಳೆಯಾದರೆ ಇನ್ನು 15 ದಿನಗಳಲ್ಲಿ ಕೆಆರ್‌ಎಸ್ ಜಲಾಶಯ ಭರ್ತಿಯಾಗಲಿದೆ.


ಉದಯವಾಹಿನಿ ಚಿತ್ರ



ಕಬಿನಿ ಜಲಾಶಯದಿಂದ 27,000 ಕ್ಯೂಸೆಕ್ ಗಿಂತ ಹೆಚ್ಚಿನ ನೀರನ್ನು ನದಿಗೆ ಬಿಡಲಾಗುತ್ತಿದ್ದು, ಇದರ ಪರಿಣಾಮ ಕಬಿನಿ ಜಲಾಶಯದ ಮುಂಭಾಗದ ಸೇತುವೆ ಮುಳುಗಡೆಯಾಗಿದೆ. ಇದರಿಂದ ಹ್ಯಾಂಡ್ ಪೋಸ್ಟ್, ಎನ್.ಬೇಗೂರು ಮುಖ್ಯ ರಸ್ತೆ, ಬಿದರಹಳ್ಳಿ, ಭೀಮನಕೊಲ್ಲಿಯ ಶ್ರೀ ಮಾದೇಶ್ವರ ದೇವಸ್ಥಾನಕ್ಕೆ ರಸ್ತೆ ಕಲ್ಪಿಸುವ ಮುಖ್ಯ ರಸ್ತೆ ಸೇರಿದಂತೆ ಸುಮಾರು 25 ಗ್ರಾಮಗಳಿಗೆ ಸಂಪೂರ್ಣ ಸಂಪರ್ಕ ಕಡಿತಗೊಂಡಿದೆ.

ಮೂರು ದಿನಗಳಿಂದ ಕೇರಳಂ ಭಾಗದಲ್ಲಿ ಸುರಿಯುತ್ತಿರುವ ಮಳೆಯಿಂದ ಕೃಷ್ಣರಾಜ ಸಾಗರ (ಕೆಆರ್‌ಎಸ್), ಕಬಿನಿ, ಹಾರಂಗಿ, ಹೇಮಾವತಿ ಜಲಾಶಯಗಳ ನೀರಿನ ಒಳಹರಿವಿನಲ್ಲಿ ಏರಿಕೆ ಕಂಡುಬಂದಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪಗಳ ಮೇಲ್ವಿಚರಣಾ ಸಂಸ್ಥೆ ಹಂಚಿಕೊಂಡಿರುವ ಮಾಹಿತಿಯ ಪ್ರಕಾರ ಆಗಸ್ಟ್ 1ರಂದು ಕಾವೇರಿ ಜಲಾನಯನ ಪ್ರದೇಶದಲ್ಲಿ ಒಟ್ಟು 36,293 ಕ್ಯೂಸೆಕ್ ನೀರಿನ ಒಳಹರಿವು, ಹಾಗೂ 2065 ಕ್ಯೂಸೆಕ್ ಹೊರಹರಿವು ದಾಖಲಾಗಿತ್ತು. ಮಂಡ್ಯ ಜಿಲ್ಲೆಯ ಕೆಆರ್‌ಎಸ್ ಜಲಾಶಯ 49.45 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ಪ್ರಸ್ತುತ 18.73 (38%) ನೀರು ಸಂಗ್ರಹವಾಗಿದೆ. 13,522 ಕ್ಯೂಸೆಕ್ ನೀರಿನ ಒಳಹರಿವು 1,565 ಕ್ಯೂಸೆಕ್ ಹೊರಹರಿವು ದಾಖಲಾಗಿತ್ತು.

**ಕಾವೇರಿ ನೀರು ವಿವಾದ** ಕಾವೇರಿ ನೀರು ಹಂಚಿಕೆ ಬಿಕ್ಕಟ್ಟಿನ ನಡುವೆ ಆಶಾದಾಯಕ ಬೆಳವಣಿಗೆ ರಾಜ್ಯದಲ್ಲಿ ಕಾವೇರಿ ನೀರು ಹಂಚಿಕೆ ವಿವಾದ ತಲೆದೋರಿರುವ ಬೆನ್ನಲ್ಲೇ ಆಶಾದಾಯಕ ಬೆಳವಣಿಗೆ ಎನ್ನುವಂತೆ ಅತ್ತ ಕೇರಳಂ ಭಾಗದಲ್ಲಿ ಸುರಿಯುತ್ತಿರುವ ಮಳೆ ಕಾವೇರಿ ಕೊಳ್ಳದ ಜಲಾಶಯಗಳಿಗೆ ನೀರಿನ ಒಳಹರಿವು ಹೆಚ್ಚಿಸಿದೆ.

**ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಹೆಚ್.ಡಿ.ಕೋಟೆ ತಾಲ್ಲೂಕಿನ ಬೀಚನಹಳ್ಳಿ ಬಳಿ ಇರುವ ಕಬಿನಿ ಜಲಾಶಯದಿಂದ ಕಪಿಲಾ ನದಿಗೆ ಹೆಚ್ಚಿನ ನೀರನ್ನು ಬಿಡಲಾಗಿದ್ದು, ಜನರು ನದಿ ಪಾತ್ರಕ್ಕೆ ಹೋಗದಂತೆ ಹಾಗೂ ಜಾನುವಾರುಗಳನ್ನು ನದಿ ಪಾತ್ರಕ್ಕೆ ಬಿಡದಂತೆ ಮನವಿ ಮಾಡಿದ್ದಾರೆ.- ಇಂಜಿನಿಯರ್ ರಂಗಯ್ಯ**

## ಮಿನಿ ನ್ಯೂಸ್

### ಪ್ರತಿಭಟನೆ ದಿನದಂದೇ ಅಂಬೇಡ್ಕರ್ ಪ್ರತಿಮೆ ಅನಾವರಣಕ್ಕೆ ಆಕ್ರೋಶ

• ಉದಯವಾಹಿನಿ, ಕೆಜಿಎಫ್

ತಾಲ್ಲೂಕಿನಲ್ಲಿ 14 ಸಾವಿರ ಪಿಂಚಣಿ ರದ್ದು 4000 ಸಾವಿರ ರೇಷನ್ ಕಾರ್ಡ್ ರದ್ದು ಕೆಜಿ.ಕೋಟೆ ಸರ್ಕಾರಿ ಸರ್ವೆ 121 ರಲ್ಲಿ ಆಕ್ರಮವಾಗಿ ದಾಖಲೆ ಸೃಷ್ಟಿಸಿ 60 ಎಕರೆ ಜಮೀನು ಮಂಜೂರು ಮಾಡಿರುವುದರ ವಿರುದ್ಧ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಬಿಜೆಪಿ ಪಕ್ಷದವತಿಯಿಂದ 5 ರಂದು ಧರಣಿ ನಡೆಸಲಾಗುವುದು ಎಂದು ಘೋಷಣೆ ಮಾಡುತ್ತಿದ್ದಂತೆ ವಿಲ ವಿಲ ಒದ್ದಾಡುತ್ತಿರುವ ಶಾಸಕಿ ರೂಪಶಶಿಧರ್ ಹಾಗೂ ಬ್ಯಾಲಹಳ್ಳಿ ಗೋವಿಂದೇಗೌಡರು ಧರಣಿಯ ದಿಕ್ಕು ತಪ್ಪಿಸಬೇಕು ಎಂದು ಅಂದೇ ಅಂಬೇಡ್ಕರ್ ರವರ ನೂತನ ಪ್ರತಿಮೆ ಅನಾವರಣಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ ಎಂದು ಮಾಜಿ ಶಾಸಕ ವೈ.ಸಂಪಂಗಿ ನೇರವಾಗಿ ಆರೋಪಿಸಿದರು. 5 ರಂದು ಹಮ್ಮಿಕೊಂಡಿರುವ ಧರಣಿಗೆ ನಗರದ ಸಾರ್ವಜನಿಕರನ್ನು ಆಹ್ವಾನಿಸುವ ನಿಟ್ಟಿನಲ್ಲಿ ನಗರದ ಎಂ.ಜಿ.ಮಾರುಕಟ್ಟೆ ಸ್ವರ್ಣಕುಪ್ಪಂ ವಿವೇಕನಗರ ಸೇರಿದಂತೆ ಮೈನಿಂಗ್ ಭಾಗದಲ್ಲಿ ಕರಪತ್ರಗಳನ್ನು ವಿತರಿಸಿದರು.ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ಶಾಸಕ ವೈ.ಸಂಪಂಗಿ ಕಳೆದ 3 ತಿಂಗಳಿನಿಂದ ತಾಲ್ಲೂಕಿನಲ್ಲಿ ವೃದ್ದರು ಪೆಷನ್ ದೊರಕದೆ ಪರದಾಟ ನಡೆಸುತ್ತಿದ್ದಾರೆ.

### ಮುಖ್ಯಮಂತ್ರಿ ಸ್ಥಾನದ ಜೊತೆಗೆ ಮಾಗಡಿ ಶಾಸಕ ಹೆಚ್. ಸಿ. ಬಾಲಕೃಷ್ಣಗೆ ಒಲಿದ ಸಚಿವ ಸ್ಥಾನ!


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಮುಖ್ಯಮಂತ್ರಿ ಆಪ್ತ ಶಾಸಕರಾದ ಬೆಂಗಳೂರು ದಕ್ಷಿಣ ಜಿಲ್ಲೆ ಮಾಗಡಿ ಶಾಸಕ ಹೆಚ್. ಸಿ. ಬಾಲಕೃಷ್ಣ ಅವರ ಬಹು ದಿನಗಳ ಕನಸು ಕೊನೆಗೂ ನನಸು ಆಗುತ್ತಿದೆ.
ಈ ಬಾರಿಯ ಸಂಪುಟ ವಿಸ್ತರಣೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಗೆ ಮುಖ್ಯಮಂತ್ರಿ ಸ್ಥಾನದ ಜೊತೆಗೆ ನಾಡಪ್ರಭು, ಬೆಂಗಳೂರು ನಿರ್ಮಾತೃ ಕೆಂಪೇಗೌಡರ ತವರೂರು ಮಾಗಡಿ ಕ್ಷೇತ್ರದ ಶಾಸಕ ಹೆಚ್. ಸಿ. ಬಾಲಕೃಷ್ಣ ಇದೇ ಮೊದಲ ಬಾರಿಗೆ ಸಚಿವರಾಗುತ್ತಿದ್ದಾರೆ. ಬಾಲಕೃಷ್ಣ ಹೆಸರಿರುವ ಕಾಂಗ್ರೆಸ್ ಹೈಕಮಾಂಡ್ ಅಂಕಿತದ ಪಟ್ಟಿ ಹೊರಬೀಳುತ್ತಿದ್ದಂತೆಯೇ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಬಾಲಕೃಷ್ಣ ಅಭಿಮಾನಿಗಳು ಸಂಭ್ರಮ ಪಟ್ಟಿದ್ದು, ಬಾಲಕೃಷ್ಣ ಅವರು ವಿಡಿಯೋ ಮೂಲಕ ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗೆ ಧನ್ಯವಾದ ಸಲ್ಲಿಸಿದ್ದಾರೆ.

ಬಿಜೆಪಿಯಿಂದ ಗೆದ್ದು ರಾಜಕೀಯ ಆರಂಭಿಸಿದ ಬಾಲಕೃಷ್ಣ ಅವರು ನಂತರ ಜೆಡಿಎಸ್ ನಲ್ಲಿ ಗೆದ್ದು ಮೂರು ಸಲ ಶಾಸಕರಾಗಿದ್ದರು. 2018ರಲ್ಲಿ ಜೆಡಿಎಸ್ ತೊರೆದು ಕಾಂಗ್ರೆಸ್ ಸೇರಿದ ಅವರು, ಆ ವರ್ಷದ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಎ. ಮಂಜುನಾಥ್ ವಿರುದ್ಧ ಸೋತಿದ್ದರು. ನಂತರ 2023ರ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ನಿಂದ ಸ್ಪರ್ಧಿಸಿ ಗೆದ್ದಿದ್ದರು. ಆದರೆ ಡಿಕೆ ಶಿವಕುಮಾರ್ ಅವರ ಬಣದಲ್ಲಿ ಗುರುತಿಸಿಕೊಂಡಿದ್ದರಿಂದ ಸಿದ್ದರಾಮಯ್ಯ ಅವರ ಮೊದಲ ಅವಧಿಯಲ್ಲಿ ಸಚಿವ ಸ್ಥಾನದಿಂದ ವಂಚಿತರಾಗಿದ್ದರು.

### ಮಾಲೂರು ಪೊಲೀಸ್ ಇನ್ಸ್‌ಪೆಕ್ಟರ್ ಗೆ ಡಿಜಿ-ಐಜಿಪಿ ಪದಕ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಲೂರು

2025-26ನೇ ಸಾಲಿನ ಪ್ರತಿಷ್ಠಿತ ಡಿಜಿ-ಐಜಿಪಿ ಪ್ರಶಂಸನಾ ಪದಕವನ್ನು ಡಿಜಿ ಐಜಿಪಿ ಎಂ.ಎ.ಸಲೀಂರಿಂದ ಮಾಲೂರು ಪೊಲೀಸ್ ಇನ್ಸ್‌ಪೆಕ್ಟರ್ ರಾಮಪ್ಪ ಬಿ.ಗುತ್ತೇರ ಪಡೆದಿರುವುದು ತಾಲ್ಲೂಕಿನ ಜನತೆಗೆ ಹೆಮ್ಮೆಯ ವಿಷಯವಾಗಿದೆ. ಪೊಲೀಸ್ ಠಾಣೆಯಲ್ಲಿ ದಕ್ಷ ಪೊಲೀಸ್ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಕಳೆದ 6 ತಿಂಗಳ ಹಿಂದೆ ನಗರ ಪೊಲೀಸ್ ಠಾಣೆಗೆ ವರ್ಗಾವಣೆಯಾದ ರಾಮಪ್ಪ ಅಂದಿನಿಂದ ಇಂದಿನವರೆಗೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೇಲಾಧಿಕಾರಿಗಳ ಮಾರ್ಗದರ್ಶನದಂತೆ ಶಾಂತಿ ಮತ್ತು ಕಾನೂನು ವ್ಯವಸ್ಥೆ ಕಾಪಾಡುವ ಮೂಲಕ ಗಾಂಜಾ ಇಸ್ಪೀಟ್ ದಂಧೆ ಐಪಿಎಲ್ ಕ್ರಿಕೆಟ್ ದಂಧೆ, ಕೋಳಿ ಪಂದ್ಯ, ವೇಶ್ಯಾವಾಟಿಕೆ ದಂಧೆ ಪತ್ತೆ ಹಚ್ಚಿ ಆರೋಪಿಗಳನ್ನು ಜೈಲಿಗೆ ಹಟ್ಟುವ ಕೆಲಸ ಮಾಡಿದ್ದಾರೆ. ಕಳ್ಳತನ ದರೋಡೆ ಅಪರಾಧ ಪ್ರಕರಣಗಳು ಸಹ ಕಡಿಮೆಯಾಗಿದ್ದು ಕಳ್ಳ ಕಾಕರಿಗೆ ರೌಡಿಶೀಟರ್‌ಗಳಿಗೆ ಸಿಂಹ ಸ್ವಪ್ನವಾಗಿದ್ದಾರೆ. ಬಡವರು ಮಧ್ಯಮ ವರ್ಗದವರು ಮಹಿಳೆಯರು ಪೊಲೀಸ್ ಠಾಣೆಗೆ ನಿರ್ಭಯವಾಗಿ ದಲಿತ ದೌರ್ಜನ್ಯ ಸಭೆಗಳು ಕಾಲಕಾಲಕ್ಕೆ ನಡೆಸಿ ಅವರ ಮೇಲೆ ದೌರ್ಜನ್ಯಗಳು ಆಗಿದ್ದಲ್ಲಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ನ್ಯಾಯ ಕೊಡಿಸುವ ಪ್ರಾಮಾಣಿಕ ಕೆಲಸ ಮಾಡಿದ್ದಾರೆ ದಲಿತಪರ ಸಂಘಟನೆಗಳ ಮುಖಂಡರಿಂದಲೂ ಸಹ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಇಲಾಖೆಯಿಂದ ನಡೆದ ಡಿಜಿಐಜಿಪಿ ಪ್ರಶಂಸನಾ ಪದಕವನ್ನು ಡಿಜಿ ಐಜಿಪಿ ಎಂ ಎ ಸಲೀಂ ಅವರಿಂದ ಪಡೆದಿದ್ದಾರೆ.

### ಕಳ್ಳಸಾಗಣಿಕೆ ತಡೆಗೆ ಸಮೂಹ ಜಾಗೃತಿ ಅಗತ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಉದ್ಯೋಗ, ಶಿಕ್ಷಣ ಹಾಗೂ ಉತ್ತಮ ಜೀವನದ ಆಮಿಷವೊಡ್ಡಿ ನಡೆಯುವ ಮಾನವ ಕಳ್ಳಸಾಗಣಿಕೆ ಸಮಾಜದ ಭೀಕರ ಪಿಡುಗಾಗಿದ್ದು, ಇದರ ವಿರುದ್ಧ ಪ್ರತಿಯೊಬ್ಬರೂ ಜಾಗೃತರಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಪಿ.ರಾಮಲಿಂಗೇಗೌಡ ಕರೆ ನೀಡಿದರು. ವಿಶ್ವ ಮಾನವ ಕಳ್ಳಸಾಗಣಿಕೆ ವಿರೋಧಿ ದಿನಾಚರಣೆ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಜಿಲ್ಲಾ ವಕೀಲರ ಸಂಘದ ಸಂಯುಕ್ತ ಆಶ್ರಯ ದಲ್ಲಿ ನಗರದ ಎಸ್‌ಜೆಸಿಐಟಿ ಕಾಲೇಜಿನಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಹಿಳೆಯರು, ಮಕ್ಕಳು ಹಾಗೂ ಯುವಜನತೆ ಮಾನವ ಕಳ್ಳಸಾಗಣಿಕೆಯ ಪ್ರಮುಖ ಗುರಿಯಾಗು ತ್ತಿದ್ದಾರೆ. ಉದ್ಯೋಗ, ವಿದೇಶಿ ಉದ್ಯೋಗ, ಶಿಕ್ಷಣ ಮತ್ತು ಉತ್ತಮ ಬದುಕಿನ ಹೆಸರಿನಲ್ಲಿ ವಂಚಕರು ಬಲೆ ಬೀಸುತ್ತಿರುವುದರಿಂದ ಯುವಕರು ಅತ್ಯಂತ ಎಚ್ಚರಿಕೆಯಿಂದಿರಬೇಕು ಎಂದು ಎಚ್ಚರಿಸಿದರು.

ವಿದ್ಯಾರ್ಥಿಗಳು ತಮ್ಮ ಹಕ್ಕುಗಳು, ಸಂವಿಧಾನ ನೀಡಿರುವ ರಕ್ಷಣೆ ಹಾಗೂ ಸಂಬಂಧಿತ ಕಾನೂನುಗಳ ಬಗ್ಗೆ ಅರಿವು ಹೊಂದಿರಬೇಕು. ಮೌನ ವಹಿಸದೆ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಸಾರ್ವಜನಿಕರ ಜಾಗೃತಿ ಮತ್ತು ಸಹಭಾಗಿತ್ವದಿಂದ ಮಾತ್ರ ಮಾನವ ಕಳ್ಳಸಾಗಣಿಕೆ ಎಂಬ ಸಾಮಾಜಿಕ ಪಿಡುಗನ್ನು ಪರಿಣಾಮಕಾರಿಯಾಗಿ ತಡೆಯಲು ಸಾಧ್ಯ ಎಂದು ಹೇಳಿದರು.

# ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಸಚಿವ ಸ್ಥಾನ ಮಿಸ್: ಟೋಲ್ ಬಂದ್ ಮಾಡಿ ಪ್ರತಿಭಟನೆ

## ಸಚಿವ ಸ್ಥಾನ ಕೊಡಲೇಬೇಕು ಅಂತಾ ಘೋಷಣೆ ಕೂಗಿದರು. ಕೈಯಲ್ಲಿ ಹೆಬ್ಬಾಳ್ಕರ್ ಭಾವಚಿತ್ರ ಹಿಡಿದು ಧರಣಿ ಕುಳಿತರು

**• ಉದಯವಾಹಿನಿ, ಬೆಳಗಾವಿ:** ಬೆಳಗಾವಿ ಗ್ರಾಮೀಣ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಚಿವ ಸ್ಥಾನ ಸಿಗದ ಹಿನ್ನೆಲೆಯಲ್ಲಿ ಹಿರೇಬಾಗೇವಾಡಿ ಬಳಿ ಟೋಲ್ ಬಂದ್ ಮಾಡಿ ಅಭಿಮಾನಿಗಳು ಪ್ರತಿಭಟನೆ ನಡೆಸಿದರು. ಮತ್ತೊಮ್ಮೆ ಸಂಪುಟದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಚಿವ ಸ್ಥಾನ ಸಿಗುವ ನಿರೀಕ್ಷೆಯಲ್ಲಿದ್ದರು. ಆದರೆ, ಇಂದು ಬಿಡುಗಡೆ ಆದ ನೂತನ

1 : ಭಾವಚಿತ್ರ ಹಿಡಿದು ಧರಣಿ ಕುಳಿತರು.
2 : ಟೋಲ್ ಗೇಟ್ ಬಳಿ ರಸ್ತೆ ತಡೆದರು
3 : ಸಿಎಂ ಹೈಕಮಾಂಡ್ ವಿರುದ್ಧ ಆಕ್ರೋಶ

ಸಚಿವರ ಪಟ್ಟಿಯಲ್ಲಿ ಹೆಬ್ಬಾಳ್ಕರ್ ಅವರಿಗೆ ನಿರಾಸೆ ಆಗಿದೆ.

ಇದರಿಂದ ಬೇಸರಗೊಂಡಿರುವ ಅವರ ಅಭಿಮಾನಿಗಳು ಹಿರೇಬಾಗೇವಾಡಿ ಬಳಿಯ ಟೋಲ್ ಗೇಟ್ ಬಳಿ ರಸ್ತೆ ತಡೆದರು.

ತಮ್ಮ ನಾಯಕಿಗೆ ಸಚಿವ ಸ್ಥಾನ ನೀಡದ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಚಿವ ಸ್ಥಾನ ಕೊಡಲೇಬೇಕು ಅಂತಾ ಘೋಷಣೆ ಕೂಗಿದರು. ಕೈಯಲ್ಲಿ ಹೆಬ್ಬಾಳ್ಕರ್





ಉದಯವಾಹಿನಿ ಚಿತ್ರ

ಇತ್ತ, ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಯಶವಂತರಾಯಗೌಡ ಪಾಟೀಲ್ ಬೆಂಬಲಿಗರು ಪ್ರತಿಭಟನೆ ನಡೆಸಿದರು. ಶಾಸಕರ ಭವನದಲ್ಲಿ ಪ್ರತಿಭಟಿಸಿದ ಬೆಂಬಲಿಗರು, ತಮ್ಮ ನಾಯಕರಿಗೆ ಸಚಿವ ಸ್ಥಾನ ತಪ್ಪಿದ್ದಕ್ಕೆ ಕೈಯಲ್ಲಿ ಯಶವಂತರಾಯಗೌಡ ಪಾಟೀಲ್ ಅವರ ಫೋಟೋ ಹಿಡಿದು ಆಕ್ರೋಶ ಹೊರಹಾಕಿದರು. -ಪಾಟೀಲ್ ಬೆಂಬಲಿಗರು

ಭಾವಚಿತ್ರ ಹಿಡಿದು ಧರಣಿ ಕುಳಿತರು.

ರಾಷ್ಟ್ರೀಯ ಹೆದ್ದಾರಿ ತಡೆದಿದ್ದರಿಂದ ಕೆಲಕಾಲ ಸಂಚಾರ ಅಸ್ತವ್ಯಸ್ಥಗೊಂಡಿತ್ತು. ಪ್ರತಿಭಟನೆ ಮುಂದುವರಿಸುತ್ತಿದ್ದಂತೆ ಪೊಲೀಸರು ಅಲ್ಲಿಂದ ಪ್ರತಿಭಟನಾಕಾರರನ್ನು ತೆರವುಗೊಳಿಸಲು ಮುಂದಾದರು. ಇದರಿಂದ ಪೊಲೀಸರ ಜೊತೆಗೆ ಹೋರಾಟಗಾರರು ವಾಗ್ವಾದಕ್ಕಿಳಿದರು. ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿದ್ದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತದೆ ಅಂತಾ ಮನವೊಲಿಸಿದ ಬಳಿಕ ಹಿರೇಬಾಗೇವಾಡಿ ಗ್ರಾಮದ ಜಗಜ್ಯೋತಿ ಬಸವೇಶ್ವರ ವೃತ್ತದಲ್ಲಿ ಮುಂದೆ ಧರಣಿ ಮುಂದುವರೆಸಿದರು. ಬೆಂಗಳೂರಿನ ಚಾಲುಕ್ಯ ವೃತ್ತದಲ್ಲಿಯೂ ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಲಿಗರು ಧರಣಿ ನಡೆಸಿದ್ದಾರೆ. ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಹಿರೇಬಾಗೇವಾಡಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಸಿ. ಪಾಟೀಲ ಮಾತನಾಡಿ, ನಮ್ಮ ನಾಯಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಅನ್ಯಾಯ ಆಗಿದೆ. ಮೂರು ವರ್ಷ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನು ಅತ್ಯುತ್ತಮವಾಗಿ

ಯಶವಂತರಾಯ ಗೌಡ ಪಾಟೀಲ್ ರಾಜೀನಾಮೆ

### 20 ನೂತನ ಸಚಿವರ ಪ್ರಮಾಣವಚನ ಸ್ವೀಕಾರ

ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಎರಡು ತಿಂಗಳ ನಂತರ ಸಂಪುಟ ವಿಸ್ತರಣೆ ನಡೆಯುತ್ತಿದೆ. 20 ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ಸಂಜೆ 5 ಗಂಟೆಯಿಂದ ಲೋಕ ಭವನದಲ್ಲಿ ನಡೆಯಿತು.

ನಡೆಸಿದ್ದಾರೆ. ಗೃಹಲಕ್ಷ್ಮೀ ಯೋಜನೆ ರಾಜ್ಯದ ಮಹಿಳೆಯರಿಗೆ ತಲುಪಿಸಲು ಶ್ರಮಿಸಿದ್ದಾರೆ. ಅಲ್ಲದೇ ರಾಜ್ಯಾದ್ಯಂತ ತಮ್ಮದೇ ಆದ ವರ್ಚಸ್ಸು ಹೊಂದಿದ್ದಾರೆ. ಇಂಥವರಿಗೆ ಸಚಿವ ಸ್ಥಾನ ನೀಡದೇ ಇರುವುದು ಸರಿಯಲ್ಲ. ಸಂಪುಟಕ್ಕೆ ಅವರನ್ನು ಸೇರಿಸಿಕೊಳ್ಳಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

**ಶಾಸಕ ಸ್ಥಾನಕ್ಕೆ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ:** ಸಚಿವ ಸ್ಥಾನ ಸಿಗಲಿಲ್ಲವೆಂದು ಅಸಮಾಧಾನಗೊಂಡು ಇಂಡಿ ಕ್ಷೇತ್ರದ ಶಾಸಕ ಯಶವಂತರಾಯಗೌಡ ಪಾಟೀಲ್ ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಯಶವಂತರಾಯಗೌಡ ಪಾಟೀಲ್ ಅವರು ಹಂಗಾಮಿ ಸ್ಪೀಕರ್ ರುದ್ರಪ್ಪ ಲಮಾಣಿ ಅವರಿಗೆ ರಾಜೀನಾಮೆ ಸಲ್ಲಿಸಿ, ಯಾವುದೇ ಪ್ರತಿಕ್ರಿಯೆ ನೀಡದೇ ತೆರಳಿದ್ದಾರೆ. ಪಾಟೀಲ್ ಅವರ ರಾಜೀನಾಮೆ ಪತ್ರವನ್ನು ಹಂಗಾಮಿ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಅವರು ವಿಧಾನಸಭೆ ಕಾರ್ಯದರ್ಶಿಯವರಿಗೆ ತಲುಪಿಸಿದ್ದಾರೆ.

## ಸ್ತನ್ಯಪಾನ ಪ್ರಕೃತಿಯ ಮೊದಲ ಲಸಿಕೆ ಬಿ. ಮೂಗಪ್ಪ ತಾಲ್ಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಅಭಿಪ್ರಾಯ

**• ಉದಯವಾಹಿನಿ, ಚಿತ್ರದುರ್ಗ**

ಮಗು ಜನಿಸಿದ ಒಂದು ಗಂಟೆ ಒಳಗಾಗಿ ಸ್ತನ್ಯಪಾನ ಪ್ರಾರಂಭಿಸಿ ಶಿಶುಮರಣ ತಗ್ಗಿಸಿ ಸ್ತನ್ಯಪಾನ ಪ್ರಕೃತಿಯ ಮೊದಲ ಲಸಿಕೆ ಎಂದು ಬಿ. ಮೂಗಪ್ಪ.

ತಾಲ್ಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳು ಹೇಳಿದರು. ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಚಿತ್ರದುರ್ಗ ನಗರದ ಬಡಮಕಾನ್ ಅಂಗನವಾಡಿ ಕೇಂದ್ರದಲ್ಲಿ ಆಯೋಜಿಸಿದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿಶ್ವಸ್ತನ್ಯಪಾನ ಸಪ್ತಹ ಕಾರ್ಯಕ್ರಮ ವನ್ನು ಪ್ರತಿವರ್ಷ ಆಗಸ್ಟ್ ಒಂದರಿಂದ ಆಗಸ್ಟ್ ಏಳರವರೆಗೆ ಆಚರಿಸಲಾಗುತ್ತಿದ್ದು ತಾಯಂದಿರು ಗಳಿಗೆ ಸ್ತನ್ಯಪಾನದ ಮಹತ್ವ ಕುರಿತು ಜಾಗೃತಿ ಮೂಡಿಸಲಾಗುತ್ತದೆ ಎಂದರು. ಜನಿಸಿದ ಮಗುವಿಗೆ ಜೇನುತುಪ್ಪ, ಸಕ್ಕರೆ ನೀರು ಕೊಡಬಾರದು, ಅಮೃತ

ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ



ಸಮಾನವಾದ ಮೊಟ್ಟಮೊದಲು ಬರುವ ತಾಯಿಯ ಗಿಣ್ಣುಹಾಲು ಮಗುವಿಗೆ ಜೀವನಪರ್ಯಂತ ರೋಗ ನಿರೋಧಕ ಶಕ್ತಿ ನೀಡುತ್ತದೆ ಎಂದರು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಮಾತನಾಡುತ್ತಾ ಯಾವುದೇ ತಪ್ಪು ತಿಳುವಳಿಕೆಗೆ ಕಿವಿಗೊಡದೆ ಜನಿಸಿದ ಮಗುವನ್ನು ತಾಯಿಯ ಅತಿ ಸಮೀಪದಲ್ಲಿ ಮಲಗಿಸುವುದರಿಂದ ತಾಯಿ ಮತ್ತು ಮಗುವಿನ ಬಾಂಧವ್ಯ ಹೆಚ್ಚುತ್ತದೆ, ಮಗುವಿನ ಸ್ಪರ್ಶ ತಾಯಿಯ ಸ್ಥಾನಗಳಲ್ಲಿ ಹಾಲಿನ ಉತ್ಪಾದನೆ ಹೆಚ್ಚಿಸುತ್ತದೆ, ಮಗು ತಾಯಿಯ ಎದೆ ಚೀಪಿದಾಗ ಆಕ್ಸಿಟೋಸಿನ್ ಬಿಡುಗಡೆಯಾಗಿ ತಾಯಿಯ ಗರ್ಭಕೋಶ ತಾನಾಗಿಯೇ ಕುಗ್ಗುವುದಲ್ಲದೆ ಬಾಣಂತಿಯಲ್ಲಿ ರಕ್ತಸ್ರಾವ ಕಡಿಮೆಯಾಗುತ್ತದೆ ಎಂದು ತಿಳಿಸುತ್ತಾ ಎದೆ ಹಾಲು ಕುಡಿಸುವ ಬಂಗಿ ಮತ್ತು ಹೊಂದಾಣಿಕೆ ಬಗ್ಗೆ ತಿಳಿಸಿದರು

ಆಶಾ ಮೆಂಟರ್ ತಬಿತ ಮಾಹಿತಿ ನೀಡಿ ನೀಡುತ್ತಾ ಮಗುವಿಗೆ ಆರು ತಿಂಗಳವರೆಗೆ ತಾಯಿಯ ಹೆದೆ ಹಾಲು ಬಿಟ್ಟು ಬೇರೆ ಏನನ್ನು ಕೊಡಬಾರದು ಆರು ತಿಂಗಳ ನಂತರ ಪೂರಕ ಮೆದು ಆಹಾರ ಪ್ರಾರಂಭಿಸಿ, ಎರಡು ವರ್ಷದ ತನಕ ತಾಯಿಯ ಎದೆ ಹಾಲು ಮಗುವಿಗೆ ಮುಂದು ವರಿಸಬೇಕೆಂದರು ಕಾರ್ಯಕ್ರಮದಲ್ಲಿ ಪಿ ಎಚ್ ಸಿ ಓ ಭಾಗ್ಯಮ್ಮ, ವಿನ್ನಿ, ಅಂಗನವಾಡಿ ಸಹಾಯಕಿ ಮನ್ಸೂರ, ಆಶಾ ಕಾರ್ಯಕರ್ತೆಯರಾದ ಕವಿತಾ, ಕೌಸರ್ ಹಾಗೂ ಗರ್ಭಿಣಿ ಮತ್ತು ಬಾಣಂತಿಯರು ಹಾಗೂ ತಾಯಂದಿರು ಹಾಜರಿದ್ದರು.

## ಕೆಎಂ ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಿರುವುದಕ್ಕೆ ಕಾಂಗ್ರೆಸ್ ನಾಯಕರಿಗೆ ಎಂ ಸಮೀವುಲ್ಲಾ ಅಭಿನಂದನೆ

**• ಉದಯವಾಹಿನಿ, ಅರಸೀಕೆರೆ**



ಉದಯವಾಹಿನಿ ಚಿತ್ರ

ಅರಸೀಕೆರೆ ಕ್ಷೇತ್ರದಲ್ಲಿ ಸತತ ನಾಲ್ಕು ಬಾರಿ ವಿಧಾನಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿ ಕ್ಷೇತ್ರಾದ್ಯಂತ ರಸ್ತೆ ಕುಡಿಯುವ ನೀರು ಅಭಿವೃದ್ಧಿ ಮಾಡಿರುವ ಶಾಸಕ ಕೆಎಂ ಶಿವಲಿಂಗೇಗೌಡರಿಗೆ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಮತ್ತು ಕಾಂಗ್ರೇಸ್ನ ಹಿರಿಯ ನಾಯಕರು ಸಚಿವ ಸ್ಥಾನ ನೀಡುವುದಕ್ಕೆ ತಾಲ್ಲೂಕಿನ ಎಲ್ಲಾ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು ಹಾಗೂ ಕಾರ್ಯಕರ್ತರು ಮುಖಂಡರ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ಅರಸಿಕೆರೆ ನಗರಸಭೆ ಮಾಜಿ ಅಧ್ಯಕ್ಷರಾದ ಎಮ್ ಸಮೀವುಲ್ಲಾ ಹೇಳಿದರು.

ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿಂದ ನಗರದಲ್ಲಿ ಪಟಾಕಿ ಸಿಡಿಸಿ ಅಭಿನಂದನೆ ಪಕ್ಷದ ಮುಖಂಡರು ಕಾರ್ಯಕರ್ತರು ಕೆಎಂ ಶಿವಲಿಂಗೇಗೌಡ ಸಚಿವರಾಗಿದ್ದಾರೆಂದು ಘೋಷಣೆಯಾದ ಹಿನ್ನಲೆಯಲ್ಲಿ ಪಟಾಕಿ ಸಿಡಿಸಿ ಕಾಂಗ್ರೆಸ್ ಪಕ್ಷದ ನಾಯಕರಿಗೆ ಮತ್ತು ತಮ್ಮ ನೆಚ್ಚಿನ ನಾಯಕ ಕೆಎಂ ಶಿವಲಿಂಗೇಗೌಡರಿಗೆ ಜಯಗೋಷ ಹಾಕಿ ಸಂಭ್ರಮಿಸಿದರು.

# ಸತತ ಮಳೆಯಿಂದ ಮೈದುಂಬಿ ಹರಿಯುತ್ತಿರುವ ಎತ್ತಿಪೋತ ಜಲಾಧಾರೆ,!

**• ಉದಯವಾಹಿನಿ, ಚಿಂಚೋಳಿ:**

ತಾಲ್ಲೂಕಿನ ಕುಂಚಾವರಂ ವ್ಯಾಪ್ತಿಯಲ್ಲಿ ಬರುವ ಗೋಪುನಾಯಕ ತಾಂಡಾ ಮತ್ತು ಸಂಗಾಪೂರ ತಾಂಡಾಗಳ ವನ್ಯಜೀವಿಧಾಮ ಅರಣ್ಯ ಪ್ರದೇಶದ ಗುಡ್ಡಗಾಡು ಗಿಡಮರಗಳ ಮಧ್ಯೆ ದುಮ್ಮಿಕ್ಕಿ ಹರಿಯುತ್ತಿರುವ ಎತ್ತಿಪೋತ ಜಲಾಧಾರೆಯು ತಮ್ಮ ನೈಸರ್ಗಿಕ ಸೌಂದರ್ಯದಿಂದ ಹರಿಯುತ್ತಿರುವ ನೀರಿನಿಂದ ಪ್ರವಾಸಿಗರು ದೂರ ದೂರದಿಂದ ಆಗಮಿಸಿ ನೋಡಿ ಕಣ್ತುಂಬಿಕೊಳ್ಳುತ್ತಾರೆ ಆದರೆ ಮೂಲಸೌಕರ್ಯದ ಸೌಲಭ್ಯವಿಲ್ಲದೆ ಪ್ರವಾಸಿಗರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಎತ್ತಿಪೋತ ಜಲಾಧಾರೆ ನೋಡಲು ಕರ್ನಾಟಕದ ಕಲಬುರ್ಗಿ,ಬೀದರ,ಯಾದಗಿರಿ,ರಾಯಚೂರ,ಬಿಜಾಪೂರ,ತೆಲಂಗಾಣ ಮತ್ತು ಆಂದ್ರಪ್ರದೇಶದ ಹೈದರಾಬಾದ್,ತಾಂಡೂರ,ವಖೀರಬಾದ್,ಜಹೀರಾಬಾದ್ ,ಸಂಗಾರೆಡ್ಡಿ,ಮಹಾರಾಷ್ಟ್ರ ಸೇರಿದಂತೆ ವಿವಿಧೆಡೆಯಿಂದ ಪ್ರವಾಸಿಗರು ಎತ್ತಪೋತ ಜಲಧಾರೆಯ ಸುಂದರ ನೋಟವನ್ನು ನೋಡಿ ಕಣ್ತುಂಬಿಕೊಳ್ಳಲು ಬರುತ್ತಾರೆ ಆದರೆ ಬಂದಿರುವ ಪ್ರವಾಸಿಗರಿಗೆ ಮೂಲಭೂತ ಸೌಕರ್ಯದಿಂದ ವಂಚಿತರಾಗಿ ಪರದಾಡುವ ಪರಿಸ್ಥಿತಿವುಂಟಾಗಿದೆ.

**ಮೂಲಭೂತ ಸೌಕರ್ಯ:** ಎತ್ತಿಪೋತ ಜಲಾಧಾರೆ ನೋಡಲು ಪ್ರವಾಸಿಗರು ಬಂದರೆ ಮಳೆ ಬಂದರೆ ಆಶ್ರಯವಿಲ್ಲ,ತಂಗಲು ಕಟ್ಟಡವಿಲ್ಲ,ಕುಡಿಯಲು ನೀರಿಲ್ಲ,ವಿಶ್ರಾಂತಿಗೆ ಕೋಣೆವಿಲ್ಲ,ಪ್ರವಾಸಿಗರಿಗೆ ಸುರಕ್ಷತೆವಿಲ್ಲ,ಊಟತಿಂಡಿ ವ್ಯವಸ್ಥೆವಿಲ್ಲ,ಕುಳಿತುಕೊಳ್ಳಲು ಆಸನವಿಲ್ಲ,ಹಾಗಾಗಿ ಪ್ರವಾಸಿಗರಿಗೆ ಮೂಲಭೂತ ಸೌಕರ್ಯವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಸರ್ಕಾರ ಏಚೇತ್ತುಕೋಂಡು ಪ್ರವಾಸಿಗರಿಗೆ ಮೂಲಭೂತ



ಉದಯವಾಹಿನಿ ಚಿತ್ರ

ಸೌಕರ್ಯ ಒದಗಿಸಬೇಕೆಂದು ಸಮಾಜ ಸೇವಕ ಹಣಮಂತ ಪೂಜಾರಿ ಒತ್ತಾಯಿಸಿದರು.

**ತೆಲಂಗಾಣ-ಕರ್ನಾಟಕ ಎಂಬ ಗೋಂದಲ:** ಎತ್ತಿಪೋತ ಜಲಾಧಾರೆಯು ಚಿಂಚೋಳಿ ತಾಲ್ಲೂಕಿಗೆ ಸಂಬಂಧಪಡುತ್ತದೆ ಆದರೆ ತೆಲಂಗಾಣದ ಜನರು ಮತ್ತು ಪೋಲಿಸರು ತೆಲಂಗಾಣಕ್ಕೆ ಸಂಬಂಧಿಸಿದ್ದುವೆಂದು ಈಗಾಗಲೇ ಸ್ಥಳದಲ್ಲಿ ತೆಲಂಗಾಣದ ಪೋಲಿಸರು ಎಚ್ಚರಿಗೆ ಮತ್ತು ಸಹಾಯಕ್ಕಾಗಿ ಸಂಪರ್ಕಿಸಲು ತೆಲುಗು ಬೋರ್ಡ ನೇತುಹಾಕಿದ್ದಾರೆ,ಎರಡು ಜಲಾಧಾರೆ ಬರುತ್ತೆ ಒಂದು ಕರ್ನಾಟಕ್ಕೆ ಒಂದು ತೆಲಂಗಾಣಕ್ಕೆ ಸೇರಿದ್ದುವೆಂದು ಕೆಲವರು ಹೇಳುತ್ತಾರೆ ಆದರೆ ಏನೇ ಇರಲಿ ಎರಡು ರಾಜ್ಯಗಳ ಜಿಲ್ಲಾಡಳಿತ ಮತ್ತು ತಾಲ್ಲೂಕಾಡಳಿತದವರು ಶೀಘ್ರದಲ್ಲೆ ಸಮಸ್ಯೆಗೆ ನಾಂದಿ ಹಾಡಬೇಕೆಂದು ಪ್ರವಾಸಿಗರ ಒತ್ತಾಯವಾಗಿದೆ.



ಮಳೆಗಾಲ ಬಂದರೆ ಜೂನ್‌ದಿಂದ ಅಗಷ್ಟ್‌ವರೆಗೆ ಎತ್ತಿಪೋತ ಜಲಾಧಾರೆಯು ನೋಡಲು ಸಾವಿರಾರು ಪ್ರವಾಸಿಗರು ರಾಜ್ಯ,ಅಂತರ ರಾಜ್ಯಗಳಿಂದ ಬರುತ್ತಾರೆ ಆದರೆ ಮೂಲಭೂತ ಸೌಕರ್ಯವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ,ಸ್ಥಳೀಯ ಶಾಸಕ ಡಾ.ಅವಿನಾಶ ಜಾಧವರು ಮುತುರ್ವಜಿ ವಹಿಸಿ ಪ್ರವಾಸಿತಾಣವೆಂದು ಘೋಷಿಸಿ ಅಭೀವೃದ್ಧಿ ಪಡಿಸಬೇಕು,ಮತ್ತು ಗಡಿ ಸಮಸ್ಯೆಯು ಜಿಲ್ಲಾಡಳಿತ ತಾಲ್ಲೂಕಾಡಳಿತ ಹಾಗೂ ಉಸ್ತುವಾರಿ ಸಚಿವರ ಜೋತೆ ಶಾಸಕರು ಚರ್ಚಿಸಿ ಸಮಸ್ಯೆ ಪರಿಹರಿಸಬೇಕು.
:- ಶರಣುಪಾಟೀಲ್ ಮೋತಕಪಳ್ಳಿ ಕಾಂಗ್ರೇಸ್ ವಕ್ತಾರರು ಚಿಂಚೋಳಿ.



ಎತ್ತಿಪೋತ ಜಲಾಧಾರೆ ಅಭಿವೃದ್ದಿಗೆ ಶಾಸಕರು ಶ್ರಮಿಸಿ ಕಳೆದ ಬಿಜೆಪಿ ಸರ್ಕಾರದಲ್ಲಿ ಅನುದಾನ ಘೋಷಣೆ ಮಾಡಿ ಬಿಡುಗಡೆ ಮಾಡಿದರು ಆದರೆ ಈ ಸರ್ಕಾರದಲ್ಲಿ ಅನುದಾನ ಹಿಂಪಡೆದಿರುವುದರಿಂದ ಅಭಿವೃದ್ದಿಗೆ ಹಿನ್ನಡೆಯಾಗಿದೆ,ಪ್ರವಾಸಿಗರು ಕರ್ನಾಟಕ,ತೆಲಂಗಾಣ,ಮಹಾರಾಷ್ಟದಿಂದ ಎತ್ತಿಪೋತ ಜಲಾಧಾರೆ ನೋಡಿ ಕಣ್ತುಂಬಿಕೊಳ್ಳಲು ಬರುತ್ತಾರೆ ಸುಂದರವಾದ ಸ್ಥಳವಾಗಿದೆ.
:- ಭೀಮಶೇಟ್ಟಿ ಮುರುಡಾ ಮಾಜಿ ಅಧ್ಯಕ್ಷರು ಬಿಜೆಪಿ ಮಂಡಲ ಚಿಂಚೋಳಿ.

## ಶಾಸಕ ಶಿವಲಿಂಗೇಗೌಡರಿಗೆ ಮಂತ್ರಿ ಸ್ಥಾನ ಅರಸೀಕೆರೆಯಲ್ಲಿ ಪಟಾಕಿ ಸಿಡಿಸಿ ಸಂಭ್ರಮ

**• ಉದಯವಾಹಿನಿ ಅರಸೀಕೆರೆ**

ಅರಸೀಕೆರೆ ನಗರದಲ್ಲಿ ಸಂಭ್ರಮದ ವಾತಾವರಣ ಸತತ ನಾಲ್ಕು ಬಾರಿ ಜಯಗಳಿಸಿದ ಅರಸೀಕೆರೆಯ ಜನಮನ ಗೆದ್ದ ಶಾಸಕ ಕೆಎಂ ಶಿವಲಿಂಗೌಡರಿಗೆ ಮಂತ್ರಿ ಪದವಿ ಲಭಿಸಿದ ಸಂದರ್ಭದಲ್ಲಿ ಪಿಪಿ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಸಂಭ್ರಮ ಆಚರಣೆ ಮಾಡಿಕೊಂಡ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅರಸೀಕೆರೆ ತಾಲ್ಲೂಕಿಗೆ ಪ್ರಥಮ ಬಾರಿಗೆ ಮಂತ್ರಿ ಪದವಿ ಲಭಿಸಿದ ವಿಚಾರ ತಿಳಿಯುತ್ತಿದ್ದಂತೆ ಪಿಪಿ ವೃತದಲ್ಲಿ ಜಮಾಯಿಸಿದ ಕಾರ್ಯಕರ್ತರು ಮುಖಂಡರು ಅಭಿಮಾನಿಗಳು ಜಯ ಘೋಷಣೆಯೊಂದಿಗೆ ಸಂಭ್ರಮಿಸಿದರು .

ಈ ಸಂದರ್ಭದಲ್ಲಿ ಕಾರ್ಯಕರ್ತರು ಉದ್ದೇಶಿ ಮಾತನಾಡಿದ ಹಾಸನ ಜಿಲ್ಲಾ ಸಾಮಾಜಿಕ ನ್ಯಾಯ ಸಮಿತಿಯ ಅಧ್ಯಕ್ಷರಾದ ಶ್ರೀಯುತ ವೆಂಕಟೇಶ್. ತಾಲ್ಲೂಕಿನ ಅಲ್ಪಸಂಖ್ಯಾತ ದಲಿತ ಹಿಂದುಳಿದ ಹಾಗೂ ಎಲ್ಲಾ ಜನಾಂಗದ ಪ್ರಾಮಾಣಿಕ ಕಾರ್ಯಕರ್ತರ ಶ್ರಮದ ಫಲವಾಗಿ ಹಿಂದು ಅರಸೀಕೆರೆಗೆ ಸಚಿವ ಸ್ಥಾನ ಸಿಕ್ಕಿದ್ದು



ಉದಯವಾಹಿನಿ ಚಿತ್ರ

ನಮಗೆಲ್ಲರಿಗೂ ಅತಿವ ಸಂತೋಷವಾಗಿದೆ ಶಾಸಕರು ಅಭಿವೃದ್ಧಿ ಹರಿಕಾರರಾಗಿದ್ದು ಸಾಕಷ್ಟು ಅರಸೀಕೆರೆ ತಾಲ್ಲೂಕನ್ನು ಮಾದರಿ ತಾಲ್ಲೂಕಾಗಿ ಮಾರ್ಪಡಿಸಿದ್ದಾರೆ ಈಗ ಸಚಿವ ಸ್ಥಾನ ಲಭಿಸಿರುವ ಸಂದರ್ಭದಲ್ಲಿ ಇಡೀ ರಾಜ್ಯಕ್ಕೆ ಉತ್ತಮ ಆಡಳಿತವನ್ನು ನೀಡಿ ನಮ್ಮ ಅರಸೀಕೆರೆಯ ಜನತೆಗೆ ಕೀರ್ತಿ ತರುತ್ತಾರೆಂದು ಜನರ ಆಶಯವಾಗಿದೆ ಜಿಲ್ಲೆಯಲ್ಲಿ ಪಕ್ಷವನ್ನು ಸಂಘಟಿಸುತ್ತಾ ಮುಂದಿನ ಎಲ್ಲಾ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಜಯಕ್ಕೆ ಎಲ್ಲಾ ಜಿಲ್ಲಾ ನಾಯಕರ ಸಹಕಾರದೊಂದಿಗೆ ಮುನ್ನಡೆಯಲಿ ಎಂದು ತಿಳಿಸಿದರು

## ತಂಬಾಕು ಮುಕ್ತ ವಲಯ ನಿರ್ಮಾಣಕ್ಕೆ ಇಲಾಖೆಗಳ ಸಮನ್ವಯ ಅಗತ್ಯ

**• ಉದಯವಾಹಿನಿ ಬೀದರ, :**

ಜಿಲ್ಲೆಯಾದ್ಯಂತ ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಕರಾಳೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕಾರ್ಯಕ್ರಮದ ವತಿಯಿಂದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಕರಾಳೆ ಅವರು ಸಭೆಯ ಅಧ್ಯಕ್ಷತೆಯಲ್ಲಿ ಮಾತನಾಡಿದರು. ಜಿಲ್ಲೆಯ ಶಿಕ್ಷಣ ಸಂಸ್ಥೆಗಳನ್ನು ಸಂಪೂರ್ಣ ತಂಬಾಕು ಮುಕ್ತ ವಲಯಗಳನ್ನಾಗಿ ರೂಪಿಸುವುದು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು ಹಾಗೂ ಸಾರ್ವಜನಿಕರಲ್ಲಿ ತಂಬಾಕಿನ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಇನ್ನಷ್ಟು ತೀವ್ರಗೊಳಿಸಬೇಕು ಎಂದು ನಿರ್ದೇಶನ ನೀಡಿದರು. ತಾಲ್ಲೂಕು ಮಟ್ಟದ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಂಬಾಕು



ಉದಯವಾಹಿನಿ ಚಿತ್ರ

ನಿಯಂತ್ರಣ ಸಮಿತಿ ಸಭೆ ನಡೆಸಿ, ಪ್ರತಿ ತಿಂಗಳು ಕಾರ್ಯಾಚರಣೆ ಹಾಗೂ ತನಿಖಾ ದಾಳಿಗಳನ್ನು ಹಮ್ಮಿಕೊಳ್ಳುವಂತೆ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು. ಮುಂದಿನ ಸಭೆಯಲ್ಲಿ ತಾಲ್ಲೂಕುವಾರು ಕೈಗೊಂಡ ಕ್ರಮಗಳು ಹಾಗೂ ಪ್ರಗತಿಯ ವರದಿಯನ್ನು ಕಡ್ಡಾಯವಾಗಿ ಮಂಡಿಸಬೇಕೆಂದು ಅಧಿಕಾರಿಗಳಿಗೆ ಆದೇಶಿಸಿದರು.

ರಾಜ್ಯ ತಂಬಾಕು ನಿಯಂತ್ರಣ ಘಟಕದ ವಿಭಾಗೀಯ ಸಂಯೋಜಕರಾದ ಶ್ರೀ ಮಹಾಂತೇಶ್ ಬಿ. ಅವರು, ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಇದುವರೆಗೆ ಕೈಗೊಂಡಿರುವ ಚಟುವಟಿಕೆಗಳು, ಸಮಗ್ರ ವರದಿಯನ್ನು ಅಪರ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

# ನಾಲ್ಕನೇ ಬಾರಿಗೆ ಸಚಿವರಾಗಿ ಪ್ರಮಾಣವಚನ ಎಸ್. ಎಸ್ ಮಲ್ಲಿಕಾರ್ಜುನ್

## ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದ ಮಂತ್ರಿಯಾಗಿ ಎಸ್.ಎಸ್ ಮಲ್ಲಿಕಾರ್ಜುನ್ ಪ್ರಮಾಣವಚನ ಸ್ವೀಕರಿಸಿದರು.

**• ಉದಯವಾಹಿನಿ ದಾವಣಗೆರೆ:**

ದಿ. ಶಾಮನೂರು ಶಿವಶಂಕರಪ್ಪ ಅವರ ಪುತ್ರ, ಎಸ್.ಎಸ್ ಮಲ್ಲಿಕಾರ್ಜುನ ಅವರು ದೇವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಅವರಿಗೆ 4ನೇ ಬಾರಿ ಸಚಿವ ಸ್ಥಾನ ದಕ್ಕಿಸಿಕೊಂಡರು. ಸಚಿವರ ಪಟ್ಟಿಯಲ್ಲಿ ಮಂಕಾಳು ವೈದ್ಯರಿಗೆ ಸ್ಥಾನ ಕಲ್ಪಿಸಲಾಗಿತ್ತು. ಕೊನೆ ಗಳಿಗೆಯಲ್ಲಿ ಎಸ್‌ಎಸ್ ಮಲ್ಲಿಕಾರ್ಜುನ ಅವರ ಹೆಸರು ಸೇರಿಸಿ ಹೊಸ ಪಟ್ಟಿ ಪ್ರಕಟಿಸಲಾಯಿತು.

ಈ ವೇಳೆ ಎಸ್‌ಎಸ್ ಮಲ್ಲಿಕಾರ್ಜುನ ಅವರು ಲೋಕಭವನಕ್ಕೆ

1 : ಮಂಕಾಳು ವೈದ್ಯರಿಗೆ ಸ್ಥಾನ ಕಲ್ಪಿಸಲಾಗಿತ್ತು
2 : ವೀರಶೈವ ಲಿಂಗಾಯತ ಸಮಾಜದವರಾಗಿದ್ದು
3 : ದಾವಣಗೆರೆ ಮತ ಕ್ಷೇತ್ರದ ಉಪ ಚುನಾವಣೆ

ತೆರಳಿ ನಾಲ್ಕನೇ ಬಾರಿ ಸಚಿವರಾಗಿ ಪ್ರಮಾಣವಚನ ಸ್ವೀಕಾರ ಮಾಡಿದರು. ಮೊದಲಿಗೆ ಪಟ್ಟಿಯಲ್ಲಿ ಹೆಸರು ಇಲ್ಲದ ಕಾರಣ ದಾವಣಗೆರೆಯಲ್ಲಿ ಅಭಿಮಾನಿಗಳಲ್ಲಿ ಆತಂಕ ಮನೆ ಮಾಡಿತ್ತು.

ಜಿಲ್ಲೆಗೆ ಎರಡು ಸಚಿವ ಸ್ಥಾನ ದಕ್ಕಿದ್ದು, ಅಭಿವೃದ್ಧಿ ಪಥದಲ್ಲಿ ದಾವಣಗೆರೆ ಸಾಗಲಿದೆ ಎಂಬುದು ಜನರ ಅಭಿಪ್ರಾಯವಾಗಿದೆ.

ಈ ಹಿಂದೆ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ಸಚಿವರಾಗಿದ್ದ ಮಲ್ಲಿಕಾರ್ಜುನ ಅವರಿಗೆ ಹೈಕಮಾಂಡ್ ಮತ್ತೊಮ್ಮೆ



ಉದಯವಾಹಿನಿ ಚಿತ್ರ

ಮಣೆ ಹಾಕಿದೆ. ದಾವಣಗೆರೆ ಉತ್ತರ ಕ್ಷೇತ್ರದ ಶಾಸಕ ಮಲ್ಲಿಕಾರ್ಜುನ್ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು.

ಜಿಲ್ಲೆಯಲ್ಲಿ ನಡೆದ ಸಿದ್ದರಾಮಯ್ಯ ಅಮೃತ ಮಹೋತ್ಸವದ ಯಶಸ್ವಿಗೆ ಕಾರಣೀಕರ್ತರಾಗಿದ್ದರು. ಇನ್ನು ದಿ. ಶಾಮನೂರು ಶಿವಶಂಕರಪ್ಪ ಅವರ ಪುತ್ರ, ವೀರಶೈವ ಲಿಂಗಾಯತ ಸಮಾಜದವರಾಗಿದ್ದು, ಈ ಬಾರಿ ಡಿ.ಕೆ. ಶಿವಕುಮಾರ್ ಸಂಪುಟಕ್ಕೆ ಸೇರಿಸಿಕೊಳ್ಳಲಾಗಿದೆ.

ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಅವರು ಗಣಿ ಮತ್ತು ಭೂ ವಿಜ್ಞಾನ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಇವರ ಪುತ್ರ ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕನಾಗಿದ್ದು, ಪತ್ನಿ ಡಾ. ಪ್ರಭಾ ಮಲ್ಲಿಕಾರ್ಜುನ ಅವರು ದಾವಣಗೆರೆ ಲೋಕಸಭಾ ಕ್ಷೇತ್ರದ ಸಂಸದೆಯಾಗಿದ್ದಾರೆ. ಬಿಕಾಂ ಪದವೀಧರರಾಗಿರುವ ಎಸ್‌ಎಸ್ ಮಲ್ಲಿಕಾರ್ಜುನ ಅವರು 1989ರಲ್ಲಿ ದಾವಣಗೆರೆ ಮತ ಕ್ಷೇತ್ರದ ಉಪ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು. 1999ರಲ್ಲಿ ದಾವಣಗೆರೆ ಉತ್ತರ ಹಾಗೂ ದಕ್ಷಿಣ

ದಿ. ಶಾಮನೂರು ಶಿವಶಂಕರಪ್ಪ ಅವರ ಪುತ್ರ

2018 ರಲ್ಲಿ ಬಿಜೆಪಿ ಶಾಸಕ ಎಸ್. ಎ. ರವೀಂದ್ರನಾಥ್ ವಿರುದ್ಧ ಸೋಲುಂಡ ಅವರು 2023ರ ಚುನಾವಣೆಯಲ್ಲಿ ಮತ್ತೆ ಗೆಲುವು ಸಾಧಿಸಿದ್ದರು. ಇದೀಗ ಮತ್ತೆ ಸಚಿವ ಸ್ಥಾನ ಅಲಂಕರಿಸಿದ್ದಾರೆ.


ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಪರಮೇಶ್ವರ್ ಜೊತೆಗೆ ಕಾಂಗ್ರೆಸ್ ಹೈಕಮಾಂಡ್ ಸಮಾಲೋಚನೆ ನಡೆಸಿ ಸಂಪುಟ ವಿಸ್ತರಣೆಯ ಕಗ್ಗಂಟನ್ನು ಬಗೆಹರಿಸಿದೆ.

ಲೋಕಭವನದ ಗಾಜಿನ ಮನೆಯಲ್ಲಿ ಕಾಂಗ್ರೆಸ್‌ನ ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ನೆರವೇರಿತು. ನೂತನ ಸಚಿವರಿಗೆ ರಾಜ್ಯಪಾಲ ಥಾವರ್ ಚಂದ್‌ಗೆಹ್ಲೋಟ್ ಪ್ರಮಾಣವಚನ ಬೋಧಿಸಿದರು.

ಕ್ಷೇತ್ರಗಳಾಗಿ ವಿಂಗಡಣೆಯಾದ ಬಳಿಕ ಗೆಲುವು ಸಾಧಿಸಿ ಎಸ್.ಎಂ ಕೃಷ್ಣ ಸರ್ಕಾರದಲ್ಲಿ ಯುವಜನ ಮತ್ತು ಕ್ರೀಡಾ ಇಲಾಖೆ ಸಚಿವರಾಗಿದ್ದರು. ಬಳಿಕ 2013ರಲ್ಲಿ ಗೆಲುವು ಸಾಧಿಸಿದ್ದರು. 2016ರಲ್ಲಿ ಶಾಮನೂರು ಶಿವಶಂಕರಪ್ಪ ಅವರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಿ ಮಲ್ಲಿಕಾರ್ಜುನ್ ಅವರಿಗೆ ಸಚಿವ ಸ್ಥಾನ ನೀಡಲಾಗಿತ್ತು. ಅಂದು ಅವರು ತೋಟಗಾರಿಕೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾಗಿದ್ದರು.

## ಮಿನಿ ನ್ಯೂಸ್

### ವಿಬಿ-ಜಿ ರಾಮ್-ಜಿ ಕಾಯ್ದೆಯ ಮಾಹಿತಿ ಜನರಿಗೆ ತಲುಪಿಸಿದ BFT ಜಾಗೃತಿ ಅಭಿಯಾನ



ಉದಯವಾಹಿನಿ ಚಿತ್ರ

**• ಉದಯವಾಹಿನಿ, ಬೈಲಹೊಂಗಲ**

ತಾಲ್ಲೂಕಿನ ಹೊಳಿನಾಗಲಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಆಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ BFT ಸಿದ್ದಪ್ಪ ಕಂಬಾರ ಅವರು ಗ್ರಾಮಸ್ಥರಿಗೆ ಕರಪತ್ರಗಳನ್ನು ವಿತರಿಸುವ ಮೂಲಕ ವಿಬಿ-ಜಿ ರಾಮ್-ಜಿ ಕಾಯ್ದೆ ಕುರಿತು ಜಾಗೃತಿ ಮೂಡಿಸಿದರು.

ಈ ವೇಳೆ ಯೋಜನೆಯ ಉದ್ದೇಶ, ಗ್ರಾಮೀಣ ಉದ್ಯೋಗಾವಕಾಶಗಳು ಹಾಗೂ ಯೋಜನೆಯಡಿ ದೊರೆಯುವ ಸೌಲಭ್ಯಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಮನೆ-ಮನೆಗೆ ತೆರಳಿ ಕರಪತ್ರ ವಿತರಿಸುವ ಮೂಲಕ ಯೋಜನೆಯ ಮಾಹಿತಿಯನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸಲಾಯಿತು.

ಕಾರ್ಯಕ್ರಮಕ್ಕೆ ಗ್ರಾಮಸ್ಥರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಯೋಜನೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸುವಲ್ಲಿ ಈ ಜಾಗೃತಿ ಅಭಿಯಾನ ಸಹಕಾರಿಯಾಯಿತು.

### ಕಮಠಾಣಾದಲ್ಲಿ ಕಾಂಗ್ರೇಸ್ ಸಂಘಟನೆ ಸೃಜನ ಅಭಿಯಾನ

**• ಉದಯವಾಹಿನಿ, ಬೀದರ್ :**



ಉದಯವಾಹಿನಿ ಚಿತ್ರ

ದಕ್ಷಿಣ ಕ್ಷೇತ್ರದ ಕಮಠಾಣ ಗ್ರಾಮದ ಹೊರವಲಯದ ಎಮ್ ಆರ್ ಫಂಕ್ಷನ್ ಹಾಲ್ ನಲ್ಲಿ ರವಿವಾರ ಕಾಂಗ್ರೆಸ್ ಪಕ್ಷದ ಸಂಘಟನೆ ಸೃಜನ ಅಭಿಯಾನದಲ್ಲಿ ಎಐಸಿಸಿ ವೀಕ್ಷಕರಾದ ರಾಜೇಶ್ ಲಿಲೋತಿಯಾ ಹಾಗು ಬೀದರ ದಕ್ಷಿಣ ಕ್ಷೇತ್ರದ ಮಾಜಿ ಶಾಸಕರಾದ ಅಶೋಕ್ ಖೇಣಿ ಸೇರಿ ಸಸಿಗೆ ನೀರೆರುವ ಮೂಲಕ ಉದ್ಘಟಿಸಿ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ''ಕಾಂಗ್ರೆಸ್ ಪಕ್ಷದಲ್ಲಿ ಸಾಮಾನ್ಯ ಕಾರ್ಯಕರ್ತರ ಅಭಿಪ್ರಾಯಕ್ಕೂ ಮಹತ್ವದ ಸ್ಥಾನವಿದ್ದು, ಸಂಘಟನಾ ಸೃಜನ ಅಭಿಯಾನದ ಮೂಲಕ ತಳಮಟ್ಟದ ಕಾರ್ಯಕರ್ತರ ಅಭಿಪ್ರಾಯ, ಸಲಹೆ ಹಾಗೂ ಸಂಘಟನಾ ಸಾಮರ್ಥ್ಯವನ್ನು ಅರಿತು ಪಕ್ಷವನ್ನು ಇನ್ನಷ್ಟು ಬಲಪಡಿಸಲಾಗುವುದು'' ಎಂದು ರಾಜೇಶ ಲಿಲೋತಿಯಾ ಹೇಳಿದರು.ಮಾನ್ಯ ಅಶೋಕ್ ಖೇಣಿ ಮಾತಾನಾಡಿ ಎಲ್ಲರೂ ಒಗ್ಗಾಟಾಗಿ ಪಕ್ಷ ಸಂಘಟನೆ ಮಾಡೋಣ ಕಳೆದ ಚುನಾವಣೆಯಲ್ಲಿ ಅಲ್ಪ ಮತಗಳಿಂದ ಸೋತಿರ ಬಹುದು ಆದರೆ ನಾನು ಕ್ಷೇತ್ರದ ಅಭಿವೃದ್ಧಿಗಾಗಿ ಶ್ರಮ ಪಡುತ್ತಿದೆನೆ ಮುಂದಿನ ವಿಧಾನಸಭಾ ಚುಣಾವಣೆಯಲ್ಲಿ ಬೀದರ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರದಲ್ಲಿ ನಮ್ಮ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವಿಗಾಗಿ ಶ್ರಮಿಸೋಣ ಎಂದು ಹೇಳಿದರು.

### ಅಖಂಡ ಬಳ್ಳಾರಿ ಜಿಲ್ಲೆಗೊಬ್ಬರೇ ಬಿ.ನಾಗೇಂದ್ರ

**• ಉದಯವಾಹಿನಿ, ಬಳ್ಳಾರಿ:**



ಉದಯವಾಹಿನಿ ಚಿತ್ರ

ಅಖಂಡ ಬಳ್ಳಾರಿ ಜಿಲ್ಲೆಗೆ ಗ್ರಾಮೀಣ ಕ್ಷೇತ್ರದ ಶಾಸಕ ಬಿ.ನಾಗೇಂದ್ರ ಅವರು ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ಸಚಿವರಾಗಿ ಸಂಜೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಅಂಖಂಡ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದಿಂದ ಎರೆಡು ಬಾರಿ ಬಿಜೆಪಿ ನಂತರ ಪಕ್ಷೇತರ ಶಾಸಕರಾಗಿ, ನಂತರ 2018 ಮತ್ತು 2023 ರಲ್ಲಿ ಬಳ್ಳಾರಿ ಗ್ರಾಮೀಣ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕರಾಗಿ ಪ್ರಬಲ ಬಿಜೆಪಿ ನಾಯಕ ಬಿ. ಶ್ರೀರಾಮುಲು ಅವರನ್ನು ಸೋಲಿಸಿ. ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಯುವಜನಸೇವೆ ಮತ್ತು ಕ್ರೀಡಾ, ಇಲಾಖೆ ಜೊತೆಗೆ ಎಸ್ಟಿ ಇಲಾಖೆಯ ಸಚಿವರಾಗಿ ಒಂದು ವರ್ಷ ಇದ್ದರು. ಅಷ್ಟರಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಹಣ ದುರ್ಬಳಕೆ ಪ್ರಕರಣದ ಆರೋಪದಿಂದ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಸಿಐಡಿ ತನಿಖೆ ನಡೆದು ಇವರ ಪಾತ್ರ ಇಲ್ಲ ಎಂದು ಹೇಳಿದ ಮೇಲೆ ಸಚಿವ ಸಂಪುಟಕ್ಕೆ ತೆಗೆದುಕೊಳ್ಳುವುದಾಗಿ ಸಿದ್ದರಾಮಯ್ಯ ಹೇಳುತ್ತಿದ್ದರಾದರೂ ಆಗಿರಲಿಲ್ಲ.ಆದರೆ ಡಿ.ಕೆ.ಶಿವಕುಮಾರ್ ಅವರ ಇಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವರಾಗಿ ಮತ್ತೊಮ್ಮೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಜಿಲ್ಲೆಯಿಂದ ನಾಗೇಂದ್ರ ಅಣ್ಣ ಸಚಿವರಾಗಲಿ ಎಂದೆ ಹೇಳುತ್ತ ಬಂದವರು ಬರು ಬರುತ್ತಾ ತಮಗೇ ಸಚಿವ ಸ್ಥಾನ ಬೇಕೆಂದು ನಡೆಸಿದ ಪ್ರಯತ್ನ ವಿಫಲವಾಗಿದೆ.ಕೂಡ್ಲಿಗಿ ಶಾಸಕರಾಗುವ ಮುನ್ನ ನಾಗೇಂದ್ರ ಅವರು ಯುವ ಕಾಂಗ್ರೆಸ್‌ನಲ್ಲಿದ್ದು ಮಾಜಿ ಸಚಿವ ಎಂ.ದಿವಾಕರ ಬಾಬು ಅವರ ಬೆಂವಲಿಗರಾಗಿದ್ದರು. ಆದರೆ ಕೇಬಲ್ ಗಲಾಟೆಯಿಂದಾಗಿ ಅವರಿಂದ ದೂರವಾಗಿ ರೆಡ್ಡಿ. ಶ್ರೀರಾಮುಲು ಗುಂಪು ಸೇರಿದ್ದರು.

ಅಕ್ರಮ ಗಣಿ ಸಾಗಾಟದ ಆರೋಪದ ಮೇಲೆ ಸಿಬಿಐನಿಂದ ಬಂಧನರಾಗಿ ಬಿಡುಗಡೆಯಾದಮೇಲೆ ಸಚಿವ ಸಂತೋಷ್ ಲಾಡ್ ಅವರಿಂದಾಗಿ ರಾಹುಲ್ ಗಾಂಧಿ ಸಮ್ಮುಖದಲ್ಲಿ ಹೊಸಪೇಟೆಯಲ್ಲಿ ನಡೆದ ಸಮಾವೇಶದಲ್ಲಿ ಕಾಂಗ್ರೆಸ್ ಸೇರಿದ್ದರು.

### ಬೆಳೆ ವಿಮೆ ಪರಿಹಾರ ಮಂಜೂರು

**• ಉದಯವಾಹಿನಿ, ಕಲಬುರಗಿ,**



2025-26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಒಟ್ಟು 3,00,952 ರೈತರು ಬೆಳೆ ವಿಮೆ ನೋಂದಣಿ ಮಾಡಿಸಿರುತ್ತಾರೆ. ಸರ್ಕಾರದಿಂದ ರೂ 585.72 ಕೋಟಿ ಬೆಳೆ ವಿಮೆ ಪರಿಹಾರ ಮಂಜೂರಾಗಿದೆ ಎಂದು ಗೃಹ ಸಚಿವರಾದ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುಬ ಅವರು 2,87,696 ರೈತರಿಗೆ ಒಟ್ಟು 243.52 ಕೋಟಿ ಬೆಳೆ ವಿಮೆ ಪರಿಹಾರದ ಮೊದಲನೆಯ ಕಂತನ್ನು ಈಗಾಗಲೆ ಜಮೆ ಮಾಡಲಾಗಿದೆ .

ಜಿಲ್ಲೆಯ 2,67,133 ರೈತರಿಗೆ ರೂ 234.73 ಕೋಟಿ ಹಾಗೂ ಸ್ಥಳೀಯ ವಿಕೋಪದಡಿ 20,563 ರೈತರಿಗೆ ರೂ 8.79 ಕೋಟಿ ಜಮೆ ಆಗಿರುತ್ತದೆ. **ಎರಡನೆಯ ಕಂತು:** ರೂ 221 ಕೋಟಿ ಅನುದಾನ ರೂ 54 ಕೋಟಿ ಬಿಡುಗಡೆಯಾಗಿದ್ದು ಕೆಲವೇ ದಿನಗಳಲ್ಲಿ ರೈತರ ಖಾತೆಗೆ ಜಮೆಯಾಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಇನ್ನುಳಿದ ರೂ 67 ಕೋಟಿ ಕೆಲವೇ ದಿನಗಳಲ್ಲಿ ಜಮೆ ಮಾಡಲು ಕ್ರಮ ಜರುಗಿಸಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ. ಹಾಗೆ, ಬೆಳೆ ಹಾನಿಯಾದ 3,26,183 ರೈತರಿಗೆ ಒಟ್ಟು ರೂ 498.73 ಕೋಟಿ ಬೆಳೆ ಹಾನಿ ಪರಿಹಾರವನ್ನು ಮೂಲಕ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

